ಯುವ ಮಾರ್ಗ



## ಮೊದಲನೇಯ ಪುಟದಿಂದ

## ವಚನ ಸಾಹಿತ್ಯ ಕ್ಷೇತ್ರಕ್ಕೆ ಫ.ಗು.ಹಳಕಟ್ಟಿ ಅವರ ಕೊಡುಗೆ ದೊಡ್ಡದು: ತಹಶೀಲ್ದಾರ್ ಸುರೇಶ ವರ್ಮ

ಜೀವನದ ಆದರ್ಶಗಳನ್ನು ಪ್ರತಿಯೊಬ್ಬರು ಪಾಲಿಸಬೇಕೆಂದರು. ಫ.ಗು.ಹಳಕಟ್ಟಿ ಅವರು ವಚನ ಸಾಹಿತ್ಯ ಮತ್ತು ಪತ್ರಿಕೋದ್ಯಮದ ಜೊತೆಗೆ ಸಂಘಟನೆ, ಬ್ಯಾಂಕಿಂಗ್, ಕೃಷಿ, ನೇಕಾರಿಕೆ, ಸಹಕಾರಿ ಹೀಗೆ ಎಲ್ಲದರಲ್ಲಿಯೂ ತಮ್ಮನ್ನು ತೊಡಗಿಸಿಕೊಂಡರು. 1910ರಲ್ಲಿ ಬಿಜಾಪುರ ಜಿಲ್ಲಾ ಲಿಂಗಾಯತ ವಿದ್ಯಾವರ್ಧಕ ಸಂಘ (ಬಿ.ಎಲ್.ಡಿ.ಇ.). 1912ರಲ್ಲಿ ಶ್ರೀಸಿದ್ದೇಶ್ವರ ಅರ್ಬನ್ ಕೋ..ಆಪರೇಟಿವ್ ಬ್ಯಾಂಕು, ಗ್ರಾಮೀಣ ಅಭಿವೃದ್ಧಿ ಸಂಘ, ಒಕ್ಕಲುತನ ಸಹಕಾರಿ ಸಂಘ, ನೇಕಾರರ ಸಂಘ, ಹತ್ತಿ ಮಾರಾಟಗಾರರು ಸಂಘ, ಸಹಕಾರ ಸಂಘಗಳನ್ನು ಸ್ಥಾಪಿಸಿ ಇವುಗಳ ಬೆಳವಣಿಗೆಗೆ ದುಡಿದರು. ಅಲ್ಲದೆ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸ್ಥಾಪನೆಯಲ್ಲಿಯೂ ಇವರು ವಹಿಸಿದ ಪಾತ್ರ ಮಹತ್ವದ್ದಾಗಿದೆ ಎಂದರು.

ಹಳಕಟ್ಟಿ ಅವರು ವಚನ ಸಾಹಿತ್ಯದ ಕಡೆಗೆ ಲಕ್ಷ್ಯ ಹರಿಸದೇ ಇದ್ದರೆ ಇಂದು ನಮಗೆ ಶಿವಶರಣರ ವಚನಗಳು ದೊರಕುತ್ತಿರಲಿಲ್ಲ. ಕತ್ತಲ ಕಾಲ ಗರ್ಭದಲ್ಲಿದ್ದ ವಚನಗಳನ್ನು ಒಬ್ಬ ಸಾಮಾನ್ಯ ವಕೀಲರಾಗಿದ್ದುಕೊಂಡು ಶರಣರ ತತ್ವಾದರ್ಶಗಳು ಅವರೊಳಗಿದ್ದ ವೈಚಾರಿಕ ಮಾನವ ಪ್ರಜ್ಞೆಯನ್ನು ಎತ್ತಿ ತೋರಿಸಿದ ಕೀರ್ತಿಗೆ ಭಾಜನರಾಗಿದ್ದಾರೆ ಎಂದು ಹಿರೇಮಠ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಸಾಹಿತಿಗಳಾದ ವೀರ ಹನುಮಾನ್, ಬಸೀರ್‌ಅಹ್ಮದ್ ಹೊಸಮನಿ, ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ, ವೇಣು ಜಾಲಿಬೆಂಚಿ, ಮಲ್ಲೇಶ, ಎಂ.ಬಿ.ನರಸಿಂಹಲು ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ಇಸ್ಮಾಯಿಲ್, ವಿನೋದ ಸೇರಿದಂತೆ ವಿವಿಧ ಶಾಲಾ-ಕಾಲೇಜ್ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಇದ್ದರು.

## ಜುಲೈ ಮಾಹೆಗೆ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್.ಕೆ

ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ ಅಂತರ್ ಜಿಲ್ಲೆ) ಪೋರ್ಟೆಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ.

ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಈ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಲುವೆಗಳಿಗೆ ನೀರು ಹರಿಸಲು ಶರಣಗೌಡ ಪಾಟೀಲ್ ಬಯ್ಯಾಪೂರ ಒತ್ತಾಯ

ಪ್ರತಿನಿಧಿಗಳ ಮನವಿಗೆ ಸ್ಪಂಧಿಸಿದ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಶೀಘ್ರ ನೀರು ಹರಿಸಲು ಸೂಚನೆ ನೀಡಿದರು. ಅಧಿಕೃತವಾಗಿ ಜುಲೈ 8ರಿಂದ ಕಾಲುವೆಗಳಿಗೆ ನೀರು ಹರಿಸುವುದಾಗಿ ಅಧಿಕಾರಿಗಳು ಹೇಳಿದರು.

ಈ ಸಂದರ್ಭದಲ್ಲಿ ಸಚಿವ ಶರಣಬಸಪ್ಪ ದರ್ಶನಾಪೂರ, ಕೆಬಿಜೆಎನ್‌ಎಲ್ ಮುಖ್ಯ ವ್ಯವಸ್ಥಾಪಕರು, ಇಂಜಿನಿಯರ್‌ಗಳು ಇದ್ದರು.

## ಯುದ್ಧ ತಡೆಗೆ ಬುದ್ಧರ ತತ್ವಾದರ್ಶ ಸಹಕಾರಿ :ಪಿ.ಜಿ.ಆರ್ ಸಿಂಧೆ



**ಬೀದರ್.ಜು.2-**ಜಗತ್ತಿನ ಕೆಲವು ದೇಶಗಳದಲ್ಲಿ ಇಂದಿನ ದಿನಮಾನಸದಲ್ಲಿ ನಡೆಯುತ್ತಿರುವ ಭೀಕರ ಯುದ್ಧಗಳ ತಡೆಗೆ ಬುದ್ಧರ ತತ್ವಾದರ್ಶ ಸಹಕಾರಿ ಎಂದು ಮಾಜಿ ಸಚಿವ ಹಾಗೂ ಭಾರತ ಸೌಟ್ ಮತ್ತು ಗೈಡ್ಸ್ ನ ಕರ್ನಾಟಕ ಆಯುಕ್ತ ಪಿಜಿಆರ್ ಸಿಂಧೆ ಹೇಳಿದರು.

ಅವರು ಸೋಮವಾರ ನಗರದ ಐಎಂಎ ಹಾಲಿನಲ್ಲಿ ಬೀದರ ಪುಟ್ಟಪರ್ತಿ ಬಾಬಾ ಎಜುಕೇಶನ್ ಸೊಸೈಟಿ ಬೀದರ್ ಮತ್ತು ಪ್ರಗತಿ ಅರ್ಥೋ ಆಸ್ಪತ್ರೆ ವತಿಯಿಂದ ಆಯೋಜಿಸಿದ

ಡಾ. ಸುಜಾತ ಲೋಕೇಶ ಹೊಸಮನಿಯವರ ಸಂಪಾದಿತ ಕೃತಿ "ಬುದ್ಧನ ಬೆಳಕು" ಮತ್ತು ಕವನ ಸಂಕಲನ "ಮನದ ಇಬ್ಬನಿ" ಪುಸ್ತಕ ಬಿಡುಗಡೆ ಕಾರ್ಯಕ್ರಮ ವನ್ನು ಉದ್ಘಾಟಿಸಿ ಮಾತನಾಡಿದರು.

ಯುದ್ಧದಿಂದ ಸಾವು ನೋವುಗಳು ಸಂಭವಿಸಿದರೆ, ಬುದ್ಧ ಮಾರ್ಗದಿಂದ ಶಾಂತಿ ನೆಮ್ಮದಿ ಸಿಗುತ್ತದೆ. ಆದ್ದರಿಂದ ಇಂದಿನ ಜನಮಾನಸಕ್ಕೆ ಬುದ್ಧ ಮಾರ್ಗ ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬೀದರ್ ವತಿಯಿಂದ ಸುಜಾತ ಹೊಸಮನಿ ಅವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಪುಟ್ಟಪೂರ್ತಿ ಬಾಬಾ ಎಜುಕೇಶನ್ ಸೊಸೈಟಿ ಹಾಗೂ ಒರ್ತ್ರೋ ಪ್ರಗತಿ ಕೇರ್ ವತಿಯಿಂದ ಕವಿಗೋಷ್ಠಿ ಮತ್ತು ಕವಿಗಳ ಸನ್ಮಾನ , ಬುದ್ಧನ ಬೆಳಕು ಮತ್ತು ಮನದ ಇಬ್ಬನಿ ಪುಸ್ತಕ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿದೆ ಅದರಲ್ಲಿ ಪ್ರಥಮ, ದ್ವಿತೀಯ, ತ್ರಿತಿಯ ಬಹುಮಾನ ನೀಡ ಲಾಗಿದೆ.ಪ್ರಥಮ ಬಹುಮಾನ ಡಾ. ಬಸರಾಜ ದಯಸಾಗರ ಅವರಿಗೆ ಮೂರು ಸಾವಿರ ನಗದು ಬಹುಮಾನ ನೀಡಲಾ ಗಿದೆ. ದ್ವಿತೀಯ ಎರಡನೆ ಬಹುಮಾನವಾಗಿ ಮಾಧುರಿ ಸ ಅವರಿಗೆ ಎರಡು ಸಾವಿರ ರೂಪಾಯಿ ಮತ್ತು ಮೂರನೇ ಭುವನೇಶ್ವರಿ ರೆಡ್ಡಿ ಒಂದು ಸಾವಿರ ರೂಪಾಯಿ ನೀಡ ಲಾಗಿ ದೆ ಸಮಾಧಾನಕಾರ ಬಹುಮಾನವಾಗಿ ಶ್ವೇತ ಹೆಗಡೆ ಅವರಿ ಗೆ ನೀಡಲಾಗಿದೆ ಪಿ. ಜಿ. ಅರಾ ಸಿಂಧ್ಯ ಅವರ ಉಧಾಘಟಕ ರಾಗಿ ಆಗಮಿಸಿದರು. ಎಂ. ಮೂಳೆ ಅವರು ಬಸವಕಲ್ಯಾಣ ಟಟಥಿ ಅವರು ಉಪಸ್ಥಿತರಿದ್ದರು.. ಸುರೇಶ ಚನಶೆಟ್ಟಿ, ಪ್ರೇಮ ಸಾಗರ ದಾಂಡೇಕರ, ಗಾನಪುರ್, ರೂಪಾ ನಾಗನಥರಾವ್, ಬಾಬುರಾವ್ ಹೊಸಮನಿ, ಆನಂದರಾವ್ ಸರ್ಕಲ್ ಇಂಸ್ಪೆಕ್ಟರ್, ದೇಶಪಾಂಡೆ, ಜಡಿ. ಭಾರಶೆಟ್ಟಿ ಅವ ರು.ಜನವಾಡಕರ ಅವರು ಅಧ್ಯಕ್ಷತೆ ವಹಿಸಿಕೊಂಡರು.. ಆಹೆಮು ದ್ದಿದೀನ್ ಬ್ರಿಮ್ಸ್ ಶಸ್ತ್ರ ಚಿಕಿತ್ಸಕರು ಊಪಸ್ಥಿತರಿದ್ದರು ಪರಿಷತ್ ಸದಸ್ಯ ಎಂ.ಜಿ ಮೂಳೆ, ಭಂತೆ ಜ್ಞಾನಸಾಗರ, ಸೌಟ್ ಮತ್ತು ಗೈಡ್ಸ್ ನ ಆಯುಕ್ತ ಗುರಮ್ಮ ಸಿದ್ದಾರೆಡ್ಡಿ, ಹಿರಿಯ ಸಾಹಿತಿ ಎಂ ಜನವಾಡಕರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಗಳಾದ ಸಂಗಮೇಶ್ವರ ಜ್ಯಾಂತೆ,ರೂಪಾ ಪಾಟೀ ಲ್.ಡಾ.ಶ್ರೇಯಾ ಮಹಿಂದ್ರಕರ್, ಸ್ವರೂಪರಾಣಿ ನಾಗೂರೆ, ಸಿದ್ಧಾ ರೂಢ ಭಾಲ್ಕೆ,ನಗನಾಥ್ ರಾವ್ ನೀಡೋದಕರ್,ಸತ್ಯಜೀತ್ ನೀಡೋದಕರ್ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

## ಐದು ವರ್ಷ ನಾನೇ ಸಿಎಂ



**ಬೆಂಗಳೂರು.ಜು.2:**ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಗಳು ಬಿರುಸಾಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 5 ವರ್ಷ ನಾನೇ ಮುಖ್ಯಮಂತ್ರಿ, ನಮ್ಮ ಸರ್ಕಾರ ಬಂಡೆ ತರ ಇರುತ್ತೆ ಎಂದು ಹೇಳುವ ಮೂಲಕ ನಾಯಕತ್ವ ಬದಲಾವಣೆಯ ಚರ್ಚೆಗಳಿಗೆ ಕೊನೆ ಹಾಡಿದ್ದಾರೆ.

ನಂದಿಬೆಟ್ಟದಲ್ಲಿಂದು ನಡೆದಿರುವ ಸಚಿವ ಸಂಪುಟ ಸಭೆಗೂ ಮುನ್ನ ನಂದಿ ಗ್ರಾಮದಲ್ಲಿರುವ ಶ್ರೀ ಭೋಗನಂದೀಶ್ವರಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 5 ವರ್ಷ ನಾನೇ ಮುಖ್ಯಮಂತ್ರಿಯಾಗಿ ಅಧಿಕಾರದಲ್ಲಿರುತ್ತೇನೆ, ನಮ್ಮ ಸರ್ಕಾರ ಬಂಡೆ ತರ ಭದ್ರವಾಗಿದೆ ನಿಮಗ್ಯಾಕೆ ಎಂದು ಮಾಧ್ಯಮದವರನ್ನು ಪ್ರಶ್ನಿಸಿದರು.

ರಾಜ್ಯದಲ್ಲಿ ನಾಯಕತ್ವ ಬದಲಾಗಲಿದೆ. ಈ ಸರ್ಕಾರ ಪತನವಾಗಲಿದೆ ಎಂಬ ಬಿಜೆಪಿ ಮತ್ತು ಜೆಡಿಎಸ್ ನಾಯಕರ ಹೇಳಿಕೆಗೂ ಕಿಡಿಕಾರಿದ ಅವರು, ಈ ರೀತಿ ಸುಳ್ಳುಗಳನ್ನು ಹೇಳುತ್ತಿರುವ ಬಿಜೆಪಿ-ಜೆಡಿಎಸ್‌ನವರು ಕಾಂಗ್ರೆಸ್ ಹೈಕಮಾಂಡಾ ಎಂದು ಸಿಟ್ಟಿನಿಂದ ಹೇಳಿದರು.

ಬಿಜೆಪಿ-ಜೆಡಿಎಸ್‌ನವರು ಸುಳ್ಳು ಹೇಳುವುದರಲ್ಲಿ ನಿಸ್ಸೀಮರು, ಸತ್ಯ ಹೇಳುವುದು ಅವರಿಗೆ ಗೊತ್ತೇ ಇಲ್ಲ ಎಂದು ವಾಗ್ದಾಳಿ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಾವೆಲ್ಲರೂ ಒಂದಾಗಿ ಒಗ್ಗಟ್ಟಾಗಿ ಇದ್ದೇವೆ. 5 ವರ್ಷ ನಾನೇ ಮುಖ್ಯಮಂತ್ರಿಯಾಗಿ ಅಧಿಕಾರದಲ್ಲಿರುತ್ತೇನೆ ಎಂದು ಹೇಳಿದರು.

ಬಿಜೆಪಿಯವರು ಜೆಡಿಎಸ್‌ನವರು ಅಧಿಕಾರದ ಹಗಲುಗನಸು ಕಾಣುತ್ತಿದ್ದಾರೆ ಎಂದು ಲೇವಡಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧಿಕಾರದಲ್ಲಿದ್ದಾಗ ಇವರು ಏನೂ ಮಾಡಲಿಲ್ಲ. ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳುವ ಹಾಗೆ ಏನು ಸಾಕ್ಷಿಗುಡ್ಡೆ ಬಿಟ್ಟು ಹೋಗಿದ್ದಾರೆ ಎಂದು ಪ್ರಶ್ನಿಸಿದರು.

ಈ ಹಿಂದೆ ಬಿಜೆಪಿ ಕುಮಾರಸ್ವಾಮಿ ಜತೆ ಸಮ್ಮಿಶ್ರ ಸರ್ಕಾರ ರಚನೆ ಮಾಡಿ ಏನು ಮಾಡಿದ್ದಾರೆ ಎಲ್ಲವೂ ಗೊತ್ತಿದೆ. ಸುಳ್ಳು ಹೇಳಿಕೊಂಡು ಜನರನ್ನು ತಪ್ಪು ದಾರಿಗೆ ಎಳೆಯುವ ಪ್ರಯತ್ನವನ್ನು ಇವರಿಬ್ಬರು ನಡೆಸಿದ್ದಾರೆ ಅಷ್ಟೆ. ಇದನ್ನು ಬಿಟ್ಟರೆ ಇವರು ಇನ್ನೇನೂ ಮಾಡಿಲ್ಲ ಎಂದು ಬಿಜೆಪಿ-ಜೆಡಿಎಸ್ ನಾಯಕರ ವಿರುದ್ಧ ಕಿಡಿಕಾರಿದರು.

ರಾಜ್ಯ ಸರ್ಕಾರದ ಸಾಧನಾ ಸಮಾವೇಶದಲ್ಲಿ ಲಕ್ಷಾಂತರ ಜನ ಸೇರಿದ್ದರು. ಮಳೆ ಬಂದರೂ ಜನ ಸಮಾವೇಶದಲ್ಲಿ ಭಾಗಿಯಾಗಿದ್ದರು. ಜನ ಸುಮ್ಮನೆ ಬರುತ್ತಾರಾ ಎಂದು ಪ್ರಶ್ನಿಸಿದ ಅವರು, ಸುಳ್ಳುಗಳನ್ನು ಹೇಳುತ್ತಿರುವ ವಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧವೂ ವಾಗ್ದಾಳಿ ನಡೆಸಿದರು.

ಅಸಮಾಧಾನ ಇಲ್ಲ ಅಪಸ್ವರ ಸಲ್ಲದು:ಡಿಕೆಶಿ

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆಯ ಚರ್ಚೆಗಳು ಬಿರುಸಾಗಿರುವಾಗಲೇ ಇದಕ್ಕೆಲ್ಲಾ ತೆರೆ ಎಳೆಯುವಂತೆ ಮಾತನಾಡಿರುವ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು, ಕಾಂಗ್ರೆಸ್‌ನಲ್ಲಿ ಯಾವುದೇ ಅಸಮಾಧಾನ ಇಲ್ಲ.

ಯಾರೇ ಆಗಲೀ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಮಾತನಾಡುವುದಾಗಲೀ, ಅಪಸ್ವರ ಎತ್ತುವುದಾಗಲೀ ಮಾಡ ಕೂಡದು ಎಂದು ಕಟ್ಟಪ್ಪಣೆ ವಿಧಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಇದ್ದಾರೆ.

ಹೀಗಿರುವಾಗ ಯಾರೇ ಆಗಲೀ ಅವರ ವಿರುದ್ದ ಅಪಸ್ವರ ಎತ್ತುವುದು, ಮುಖ್ಯಮಂತ್ರಿ ಹುದ್ದೆ ಬದಲಾವಣೆ ಬಗ್ಗೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗಬೇಕು. ಅವರಿಗೆ ಪಕ್ಷ ಅವಕಾಶ ಕೊಡಬೇಕು, ಅವರು ಪಕ್ಷಕ್ಕಾಗಿ ದುಡಿದಿದ್ದಾರೆ ಎಂಬ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಹೇಳಿಕೆ ಸರಿಯಲ್ಲ. ನಾನು ನನ್ನ ಹೆಸರನ್ನು ಹೇಳಿ ಎಂದು ಯಾರಿಗೂ ಹೇಳಿಲ್ಲ. ಪಕ್ಷಕ್ಕಾಗಿ ನನ್ನಂತೆ ಲಕ್ಷಾಂತರ ಜನ ಕಾರ್ಯಕರ್ತರು ದುಡಿದಿದ್ದಾರೆ.

ನಾನೊಬ್ಬನೆ ದುಡಿದಿಲ್ಲ. ಹೀಗಿರುವಾಗ ಶಾಸಕರುಗಳು ನನ್ನ ಹೆಸರು ಹೇಳುತ್ತಿರುವುದು ಸರಿಯಲ್ಲ. ಇಕ್ಬಾಲ್ ಹುಸೇನ್ ಅವರಿಗೆ ನೋಟಿಸ್ ಜಾರಿ ಮಾಡಿದ್ದೇನೆ. ಇನ್ನು ಹಲವರಿಗೆ ನೋಟಿಸ್ ಜಾರಿ ಮಾಡಲಾಗುವುದು ಎಂದರು.

ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯನವರು ಇದ್ದಾರೆ. ಹೀಗಿರುವಾಗ ಮುಖ್ಯಮಂತ್ರಿ ಹುದ್ದೆ ಬಗ್ಗೆ ಅಪಸ್ವರ ಎತ್ತುವುದು ಸರಿಯಲ್ಲ. ನಾನೊಬ್ಬನೇ ಪಕ್ಷ ಕಟ್ಟಿಲ್ಲ, ನನ್ನಂತೆ ಲಕ್ಷಾಂತರ ಜನ ಕಾರ್ಯಕರ್ತರು ಪಕ್ಷ ಕಟ್ಟಿದ್ದಾರೆ. ಮೊದಲು ಅವರ ನಂಬಿಕೆ ಉಳಿಸಿಕೊಳ್ಳೋಣ ಎಂದರು.

ಅಸಮಾಧಾನ ಇಲ್ಲ

ಪಕ್ಷದಲ್ಲಿ ಎಲ್ಲಿಯೂ ಅಸಮಾಧಾನ ಇಲ್ಲ. ಪಕ್ಷ ಸಂಘಟನೆ ಸೇರಿದಂತೆ ಎಲ್ಲ ಆಗು ಹೋಗುಗಳ ಬಗ್ಗೆ ಶಾಸಕರ ಜತೆ ಚರ್ಚೆ ನಡೆಸಿ ಅಭಿಪ್ರಾಯ ಸಂಗ್ರಹಿಸಲು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲ ಅವರು ರಾಜ್ಯದಲ್ಲಿ ಇದ್ದಾರೆ ಎಂದರು.

ಹಲವಾರು ಶಾಸಕರು ರಾಜ್ಯ ಉಸ್ತುವಾರಿ ರಣದೀಪ್ ಸುರ್ಜೇವಾಲ ರವರ ಮುಂದೆ ತಮ್ಮ ದೂರು ದುಮ್ಮಾನಗಳನ್ನು ಹೇಳಿಕೊಂಡಿದ್ದಾರೆ. ಅವರು ಸಹ ಶಾಸಕರ ಮಾತುಗಳನ್ನು ಆಲಿಸಿದ್ದಾರೆ. ಮುಂದಿನ ಚುನಾವಣೆಗೆ ಹೇಗೆ ತಯಾರಿ ನಡೆಸಬೇಕು, ಯಾರಿಗೆ ಯಾವ ಜವಾಬ್ದಾರಿಗಳನ್ನು ನೀಡಬೇಕು ಎಂಬೆಲ್ಲ ಬಗ್ಗೆಯೂ ಸುರ್ಜೆವಾಲ ಅವರು ಚರ್ಚೆ ನಡೆಸಿದ್ದಾರೆ. ಅವರು ಬಂದಿರುವುದು ಪಕ್ಷ ಸಂಘಟನೆಯ ಬಗ್ಗೆ ಚರ್ಚಿಸಲು, ಬೇರೆ ವಿಷಯಗಳ ಬಗ್ಗೆಯಲ್ಲ ಎಂದು ಸ್ಪಷ್ಟಪಡಿಸಿದರು.

ಉತ್ತರ ಜಿಲ್ಲೆ ಬೇಡಿಕೆ ಇದೆ

ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು ಮರು ನಾಮಕರಣ ಮಾಡುವಂತೆ ಬೇಡಿಕೆ ಇಟ್ಟಿದ್ದಾರೆ. ಇಂದು ನಂದಿಬೆಟ್ಟದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ಮಾಡಲಾಗುವುದು ಎಂದರು.

ಈ ಮೊದಲು ಕನಕಪುರ, ಚನ್ನಪಟ್ಟಣ, ರಾಮನಗರ, ಹೊಸಕೋಟೆ, ನೆಲಮಂಗಲ, ದೇವನಹಳ್ಳಿ, ದೊಡ್ಡಬಳ್ಳಾಪುರ, ಮಾಗಡಿ ಎಲ್ಲ ಸೇರಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಿತ್ತು. ಬೆಂಗಳೂರು ದಕ್ಷಿಣ ಜಿಲ್ಲೆ ರಚನೆಯಾದ ಮೇಲೆ ಉಳಿದಿರುವ ನೆಲಮಂಗಲ, ಹೊಸಕೋಟೆ, ದೊಡ್ಡಬಳ್ಳಾಪುರ ಮತ್ತು ದೇವನಹಳ್ಳಿ ತಾಲ್ಲೂಕುಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಒಳಪಟ್ಟಿದ್ದವು. ಈಗ ಇದನ್ನು ಬೆಂಗಳೂರು ಉತ್ತರ ಜಿಲ್ಲೆ ಮಾಡಬೇಕು ಎಂಬ ಪ್ರಸ್ತಾವನೆ ಇದೆ ಎಂದರು.

ನಂದಿಬೆಟ್ಟದಲ್ಲಿ ಕಳೆದ ವಾರವೇ ಸಂಪುಟ ಸಭೆ ನಡೆಸಬೇಕಿತ್ತು. ಅಭಿವೃದ್ಧಿಗೆ ಸಂಬಂಧಿಸಿದ ಕೆಲವೊಂದು ಕಡತಗಳು ಪೂರ್ಣಗೊಳ್ಳದ ಕಾರಣ ಇಂದು ಸಭೆ ನಡೆಸಿದ್ದೇವೆ. ಕೋಲಾರ, ಚಿಕ್ಕಬಳ್ಳಾಪುರ ಭಾಗಕ್ಕೆ ಈಗಾಗಲೇ ಕುಡಿಯುವ ನೀರಿನ ಯೋಜನೆಗಳನ್ನು ನೀಡಿದ್ದೇವೆ. ಮತ್ತಷ್ಟು ಅಭಿವೃದ್ಧಿ ಕಾರ್ಯಗಳ ಬಗ್ಗೆ ತೀರ್ಮಾನ ಮಾಡುತ್ತೇವೆ ಎಂದರು.

ಮಾಗಡಿಯಲ್ಲಿ ನಾಡಪ್ರಭು ಕೆಂಪೇಗೌಡರ ಸ್ಮಾರಕ ಅಭಿವೃದ್ಧಿ ಸೇರಿದಂತೆ ಆ ಭಾಗದ ಒಂದಷ್ಟು ಸಣ್ಣಪುಟ್ಟ ನೀರಾವರಿ ಯೋಜನೆಗಳ ಅನುಷ್ಠಾನದ ಬಗ್ಗೆಯೂ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸುತ್ತೇವೆ ಎಂದು ಅವರು ಹೇಳಿದರು.

## ರೋಗ ನಿವಾರಣೆಗೆ ವೈದ್ಯರಿಂದ ತಮ್ಮ ಜೀವನ ಸಮರ್ಪಣೆ

**ಇಂಡಿ,ಜು.2-** ಸಮಾಜದ ಸ್ವಾಸ್ಥವನ್ನು ಕಾಪಾಡುವಲ್ಲಿ ವೈದ್ಯರ ಪಾತ್ರವು ಅತ್ಯಂತ ಮಹತ್ವವಾದುದು. ರೋಗಿಗಳ ರೋಗ ನಿವಾರಣೆಗೆಂದೇ ವೈದ್ಯರು ತಮ್ಮ ಜೀವನವನ್ನೇ ಸಮರ್ಪಿಸಿ ಕೊಳ್ಳುತ್ತಾರೆ. ವೈದ್ಯರು ರೋಗಿಗಳು ಶೀಘ್ರಗತಿಯಲ್ಲಿ ಗುಣಮು ಖರಾಗಲಿ ಅವರ ಆರೋಗ್ಯ ಸುಸ್ಥಿತಿಯಲ್ಲಿರಲಿ ತನ್ಮೂಲಕ ಸಾಮಾಜಿಕ ಜೀವನ ಗುಣಮೌಲ್ಯವು ಉತ್ತಮಗೊಳ್ಳಲಿ ಶ್ರಮಿಸು ತ್ತಾರೆ ಎಂದು ಭಾರತೀಯ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ ಮುಖ್ಯ ಪ್ರಬಂದಕ ಸುನೀಲ ಪರಿಮಳ ಹೇಳಿದರು.

ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ ಆವರಣದಲ್ಲಿ ಬ್ಯಾಂಕಿನ 70 ನೆಯ ವರ್ಷದ ದಿನಾಚರಣೆ ನಿಮಿತ್ಯ ಮತ್ತು ವೈದ್ಯ ದಿನಾಚರಣೆ ನಿಮಿತ್ಯ ವೈದ್ಯರಿಗೆ ಸನ್ಮಾನಿಸುವ ಕಾರ್ಯ ಕ್ರಮದಲ್ಲಿ ಮಾತನಾಡಿದರು.

ವೈದ್ಯೋ ನಾರಾಯಣ ಹರಿ ಎಂದು ವೈದ್ಯರನ್ನು ಪೂಜಿಸ ಲಾಗುತ್ತಿದೆ. ಆಧುನಿಕತೆ ಬೆಳೆದಂತೆ ಅನೇಕ ರೋಗಗಳು ಹುಟ್ಟಿಕೊ ಳ್ಳುತ್ತವೆ. ನಿತ್ಯ ರೋಗಿಗಳ ಸೇವೆಯ ಕಾಯಕದಲ್ಲಿ ತೊಡಗಿರುವ ವೈದ್ಯರ ಸೇವೆ ನಿತ್ಯ ಸ್ಮರಣೀಯ ಎಂದರು.

ಭಾರತೀಯ ಸ್ಟೇಟ್ ಬ್ಯಾಂಕು ಎಲ್ಲ ರೀತಿಯ ಸಾಲ ನಿಡುತ್ತಿದ್ದು ರೈತರಿಗೆ, ನೌಕರಸ್ಥರಿಗೆ ಮನೆ ಕಟ್ಟಲು, ಬಂಗಾರದ ಮೇಲೆ , ಶಿಕ್ಷಣಕ್ಕೆ ಸೇರಿದಂತೆ ಎಲ್ಲ ರೀತಿಯ ಸಾಲ ನೀಡುವಲ್ಲಿ ಮುಂಚುಣಿಯಲ್ಲಿದೆ ಎಂದರು.

ವೈದ್ಯರಾದ ಡಾ.ಅನೀಲ ವಾಲಿ, ಪರಮಾನಂದ ಬಿರಾದಾರ, ಪ್ರವೀಣ ಗಜಾಕೋಶ,ಡಾ.ಕದಮ್, ಡಾ.ವಿಪುಲ ಕೋಳೆಕರ ಮತ್ತು ಕಿರಣ ಗಜಾಕೋಶ ಇವರನ್ನು ಸನ್ಮಾನಿಸಲಾಯಿತು.

ಬ್ಯಾಂಕಿನ ಆನಂದ ಮ್ಯಾಕೇರಿ, ಪ್ರಕಾಶ ಗುಜ್ಜಲಕರ, ಸತೀಶ ಬಿ, ಅಜಯ ಯರಮತ್ತು. ಚೇತನಾ ಸದ್ಲಾಪುರ, ಆದರ್ಶ ಸಾಲಿಮಠ, ರವಿ ಪಾಟೀಲ, ಅಕ್ಷಯ ಹಾದಿಮನಿ ಮತ್ತಿತರಿದ್ದರು

# ಸಿಎಂ ಅಪಮಾನ ಎಎಸ್‌ಪಿ ಭರಮನಿ ಸ್ವಯಂ ನಿವೃತ್ತಿಗೆ ಮನವಿ

**ಧಾರವಾಡ,ಜು.2–** ಕೆಲವು ಕಾರ್ಯಕ್ರಮವೊಂದರಲ್ಲಿ ವೇದಿಕೆ ಮೇಲೆಯೇ ಸಿಎಂ ಸಿದ್ದರಾಮಯ್ಯ ಅವರಿಂದ ಅಪಮಾನಕ್ಕೊಳಗಾಗಿದ್ದ ಎಎಸ್‌ಪಿ ನಾರಾಯಣ ಭರಮನಿ ಅವರು ಸ್ವಯಂ ನಿವೃತ್ತಿ ಕೋರಿ ರಾಜ್ಯಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಕಾರ್ಯಕ್ರಮವೊಂದರಲ್ಲಿ ವೇದಿಕೆ ಮೇಲೆಯೇ ಸಿಎಂ ಸಿದ್ದರಾಮಯ್ಯ ಅವರಿಂದ ಎಎಸ್‌ಪಿ ನಾರಾಯಣ ಭರಮನಿ ಅಪಮಾನಕ್ಕೆ ಒಳಗಾಗಿದ್ದರು. ಬೆಳಗಾವಿ ಸಮಾರಂಭದಲ್ಲಿ ಅಧಿಕಾರಿ ಮೇಲೆ ಸಿಎಂ ಕಪಾಳಮೋಕ್ಷಕ್ಕೆ ಮುಂದಾಗಿದ್ದರು. ಈ ಸನ್ನಿವೇಶದಿಂದ ಅಧಿಕಾರಿ ನೊಂದುಕೊಂಡಿದ್ದರು. ಅದೇ ಕಾರಣಕ್ಕೆ ಈ ನಿರ್ಧಾರ ಕೈಗೊಂಡಿದ್ದಾರೆಯೇ ಎಂಬ ಪ್ರಶ್ನೆ ಮೂಡಿದೆ. ಸ್ವಯಂಪ್ರೇರಿತ ನಿವೃತ್ತಿಗೆ ನಾರಾಯಣ ಅವರು ಅರ್ಜಿ ಸಲ್ಲಿಸಿದ್ದಾರೆ. ಹಿರಿಯ ಅಧಿಕಾರಿಗಳು ಸಿಎಂ ಸಮ್ಮುಖದಲ್ಲಿ ಅಧಿಕಾರಿಯ ಮನವೊಲಿಸಲು ಪ್ರಯತ್ನಿಸಿದ್ದಾರೆ. ಮನವೊಲಿಕೆಯಿಂದ ಅಧಿಕಾರಿ ಭರಮನಿ ಅವರು ಸ್ವಲ್ಪಮಟ್ಟಿಗೆ ಶಾಂತವಾಗಿದ್ದಾರೆ.




ತಮಗಾದ ಅವಮಾನಕ್ಕೆ ಬರಮಣ್ಣಿ ಅವರು ನೊಂದುಕೊಂಡಿದ್ದರು. ಹೀಗಾಗಿ, ಕೆಲಸದಿಂದಲೇ ಸ್ವಯಂ ನಿವೃತ್ತಿಗೆ ಮುಂದಾಗಿದ್ದರು. ಅಧಿಕಾರಿಯ ನಡೆಯಿಂದ ಸರ್ಕಾರಕ್ಕೆ ಮುಜುಗರ ಆಗಿದೆ.

# ಸಿಎಟಿ ರದ್ದು ಪ್ರಶ್ನಿಸಿ ಸರ್ಕಾರ ಹೈಕೋರ್ಟ್‌ಗೆ ಮೊರೆ

**ಬೆಂಗಳೂರು,ಜು.2–**ಐಪಿಎಲ್ ನಲ್ಲಿ ಆರ್ ಸಿಬಿ ಜಯಗಳಿಸಿದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಸಂಭವಿಸಿದ್ದ ಕಾಲ್ತುಳಿತ ಪ್ರಕರಣ ಸಂಬಂಧ ಐಪಿಎಸ್ ಅಧಿಕಾರಿ ವಿಕಾಸ್ ಕುಮಾರ್ ಅವರ ಅಮಾನತು ಆದೇಶವನ್ನು ರದ್ದುಗೊಳಿಸಿದ ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ (ಸಿಎಟಿ) ಕ್ರಮದ ವಿರುದ್ಧ ಕರ್ನಾಟಕ ಸರ್ಕಾರ ಹೈಕೋರ್ಟ್ ಮೆಟ್ಟಿಲೇರಿದೆ.

ಪ್ರಕರಣದ ತುರ್ತು ವಿಚಾರಣೆ ಕೋರಿ ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಸರ್ಕಾರದ ಪರ ಅಡ್ವೋಕೇಟ್ ಜನರಲ್(ಎಜಿ) ಶಶಿಕಿರಣ್ ಶೆಟ್ಟಿ ಅರ್ಜಿ ಸಲ್ಲಿಸಿದ್ದಾರೆ.

ರಾಜ್ಯ ಸರ್ಕಾರದ ಅರ್ಜಿಯನ್ನು ಕೈಗೆತ್ತಿಕೊಂಡ ಹೈಕೋರ್ಟ್ ವಿಭಾಗೀಯ ಪೀಠ, ಇಂದೇ ವಿಚಾರಣೆಯಾಗಬೇಕೆಂಬ ತರಾತುರಿ ಏಕೆ ಎಂದು ಪ್ರಶ್ನಿಸಿದಾಗ ಎಜಿ ಶಶಿಕಿರಣ್ ಶೆಟ್ಟಿ, ಸಿಎಟಿ ಆದೇಶದ ಹಿನ್ನೆಲೆಯಲ್ಲಿ ಅಧಿಕಾರ ವಹಿಸಿಕೊಳ್ಳಲು ಅಧಿಕಾರಿ ಮುಂದಾಗಿದ್ದಾರೆ. ಹೀಗಾಗಿ ತುರ್ತು ವಿಚಾರಣೆ ನಡೆಸಬೇಕು ಎಂದು ಮನವಿ ಮಾಡಿದರು.ಮನವಿ ಆಲಿಸಿದ ವಿಭಾಗೀಯ ಪೀಠವು ಇಂದು ವಿಚಾರಣೆ ನಡೆಸಲಾಗುವುದು ಎಂದು ತಿಳಿಸಿತು.

2025ರ ಜೂನ್ 4ರಂದು ನಡೆದ ಆರ್‌ಸಿಬಿ ವಿಜಯೋತ್ಸವದಲ್ಲಿ ಎಂ.ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾಗಿದ್ದ ಕಾಲ್ತುಳಿತದಿಂದ 11 ಮಂದಿ ಸಾವನ್ನಪ್ಪಿಸ್ದರು. ಘಟನೆಗೆ ಪೊಲೀಸರ ನಿರ್ಲಕ್ಷ್ಯವೇ ಕಾರಣ ಎಂದು ತಿಳಿಸಿದ್ದ ಸರ್ಕಾರ, ಬೆಂಗಳೂರು ಪೊಲೀಸ್ ಆಯುಕ್ತರಾಗಿದ್ದ ಬಿ.ದಯಾನಂದ್, ಅರ್ಜಿದಾರ ಅಧಿಕಾರಿ ವಿಕಾಸ್ ಕುಮಾರ್ ಮತ್ತಿತರರನ್ನು ಅಮಾನತು ಮಾಡಿ ಆದೇಶಿಸಿತ್ತು. ಇದನ್ನು ವಿಕಾಸ್ ಕುಮಾರ್ ಸಿಎಟಿಗೆ ಪ್ರಶ್ನಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ್ದ ಸಿಎಟಿ, ಸರ್ಕಾರದ ಅಮಾನತ್ತು ಆದೇಶ ರದ್ದುಪಡಿಸಿತ್ತು. ಅಲ್ಲದೇ, ತಕ್ಷಣ ಅರ್ಜಿದಾರರನ್ನು ಅದೇ ಹುದ್ದೆಗೆ ಮರುನಿಯೋಜನೆಗೆ ಮಾಡುವಂತೆ ಆದೇಶದಲ್ಲಿ ತಿಳಿಸಿತ್ತು.

**ಸಿಎಟಿ ಹೇಳಿದ್ದೇನು?:**ಜೂನ್ 3ರಂದು ನಡೆದಿದ್ದ ಐಪಿಎಲ್ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಗೆದ್ದು ಚಾಂಪಿಯನ್ ಆಗಿತ್ತು. ಅಂದು ರಾತ್ರಿ ನಗರದ ಬೀದಿಗಳಲ್ಲಿ ಸಾರ್ವಜನಿಕರು ವಿಜಯೋತ್ಸವ ನಡೆಸುತ್ತಿದ್ದರು. ಅವರನ್ನು ನಿಯಂತ್ರಿಸುವಲ್ಲಿ ಇಡೀ ಪೊಲೀಸ್ ವ್ಯವಸ್ಥೆ ನಿರತವಾಗಿತ್ತು. ಈ ನಡುವೆ ವಿಜಯೋತ್ಸವ ಕಾರ್ಯಕ್ರಮಕ್ಕೆ ಪೊಲೀಸರ ಅನುಮತಿ ಪಡೆಯದೇ, ಆರ್‌ಸಿಬಿ ಸಾಮಾಜಿಕ ಜಾಲತಾಣಗಳಲ್ಲಿ ಕರೆ ಕೊಟ್ಟಿದೆ. ಹೀಗಾಗಿ, ಸುಮಾರು 3 ರಿಂದ 5 ಲಕ್ಷ ಜನ ಸೇರಿದ್ದರು. ಇದೇ ವೇಳೆ ವಿಧಾನಸೌಧದ ಆವರಣದಲ್ಲಿ ರಾಜ್ಯ ಸರ್ಕಾರ ಮತ್ತೊಂದು ಕಾರ್ಯಕ್ರಮ




ಆಯೋಜಿಸಿದ್ದು, ಅದಕ್ಕಾಗಿ ಪೊಲೀಸರನ್ನು ನಿಯೋಜಿಸಲಾಗಿತ್ತು. ಸಮಯದ ಕೊರತೆ ಮತ್ತು ಅತ್ಯಂತ ಕಡಿಮೆ ಅವಧಿಯಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಲು ಪೊಲೀಸರಿಗೆ ಸಾಧ್ಯವಾಗಿಲ್ಲ. ಆರ್‌ಸಿಬಿ ಆಹ್ವಾನದಿಂದ ಜನದಟ್ಟಣೆ ಹೆಚ್ಚಾಗಿ ಘಟನೆ ಸಂಭವಿಸಿದೆ ಎಂದು ಸಿಎಟಿ ಹೇಳಿದೆ.

ಘಟನೆಗೆ ಕಾರಣರಾದ ಅಧಿಕಾರಿಗಳನ್ನು ನಿರ್ಲಕ್ಷ್ಯದ ಆರೋಪದಲ್ಲಿ ಅಮಾನತು ಮಾಡಿರುವ ಆದೇಶಕ್ಕೆ ಸೂಕ್ತ ಪುರಾವೆಗಳಿಲ್ಲ. ಜೊತೆಗೆ, ಜನರನ್ನು ನಿಯಂತ್ರಣ ಮಾಡುವುದಕ್ಕೆ ವ್ಯವಸ್ಥೆ ಮಾಡಿಕೊಳ್ಳುವುದಕ್ಕೆ ಸಮಯವಿತ್ತು ಎಂಬುದನ್ನು ತೋರಿಸುವುದಕ್ಕೂ ಸಾಕ್ಷ್ಯಾಧಾರಗಳಿಲ್ಲ. ವಿಜಯೋತ್ಸವ ಆಚರಣೆಗೆ ಸಂಘಟನೆಕಾರರಾದ ಸೂಕ್ತ ಮನವಿ ಸಲ್ಲಿಸದ ಪರಿಣಾಮ ಪೊಲೀಸರು ಅನುಮತಿಯನ್ನೂ ನೀಡಿರಲಿಲ್ಲ. ಅಲ್ಲದೇ, ಘಟನೆಗೆ ಕಾರಣ ಪತ್ತೆಗೆ ರಚನೆ ಮಾಡಿರುವ ಆಯೋಗ ಈವರೆಗೂ ವರದಿ ನೀಡಿಲ್ಲ ಎಂದು ಸಿಎಟಿ ತಿಳಿಸಿತ್ತು.

ಪೊಲೀಸರು ಮಾಂತ್ರಿಕರಲ್ಲ:ಪೊಲೀಸ್ ಸಿಬ್ಬಂದಿಯೂ ಕೂಡ ಮನುಷ್ಯರೇ ಆಗಿದ್ದಾರೆ. ಅವರು ಮಾತ್ರಿಕರಲ್ಲ, ದೇವರೂ ಅಲ್ಲ, ಅಷ್ಟು ಜನದಟ್ಟಣೆ ನಿಯಂತ್ರಿಸಲು ಪೊಲೀಸರ ಬಳಿ ಅಲ್ಲಾದ್ದೀನ್ ದೀಪದಂತಹ ಮಾಂತ್ರಿಕ ದೀಪವಿರಲಿಲ್ಲ. ಸೂಕ್ತ ಸಿದ್ಧತೆ ಮಾಡಿಕೊಳ್ಳಲು ಪೊಲೀಸರಿಗೆ ಸಮಯ ನೀಡಬೇಕಿತ್ತು ಎಂದು ತಿಳಿಸಿ ಸರ್ಕಾರದ ಆದೇಶವನ್ನು ಸಿಎಟಿ ರದ್ದುಪಡಿಸಿ ಆದೇಶಿಸಿತ್ತು. ಇದೀಗ ಸರ್ಕಾರ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದೆ.

ಜೂನ್ 3 ರಂದು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿಯ ಐಪಿಎಲ್ ವಿಜಯೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದ್ದು, ಆ ಸಂದರ್ಭ ಸಂಭವಿಸಿದ್ದ ಕಾಲ್ತುಳಿತದಲ್ಲಿ 11 ಮಂದಿ ಮೃತಟ್ಟು, ಸುಮಾರು 40 ಮಂದಿ ಗಾಯಗೊಂಡಿದ್ದರು.

# “ಸಿದ್ದರಾಮಯ್ಯರನ್ನು ಬೆಂಬಲಿಸುವುದು ಬಿಟ್ಟು ನನಗೆ ಬೇರೆ ಆಯ್ಕೆಗಳೇ ಇಲ್ಲ” ಎಂದ ಡಿಕೆಶಿ

**ಚಿಕ್ಕಬಳ್ಳಾಪುರ,ಜು.2–**ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ 5 ವರ್ಷ ಪೂರ್ಣಗೊಳಿಸಲಿದ್ದಾರೆ. ನನಗೆ ಬೇರೆ ಆಯ್ಕೆಗಳೇ ಇಲ್ಲ. ಅವರನ್ನು ಬೆಂಬಲಿಸಲೇಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿಕೆ ನೀಡಿದ್ದಾರೆ.

ನಂದಿಬೆಟ್ಟದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಸಿದ್ದರಾಮಯ್ಯ ಅವರನ್ನು ನಾನು ಬೆಂಬಲಿಸಲೇಬೇಕು. ಬೆಂಬಲಿಸುತ್ತೆ?ನೆ. ಅವರ ಬೆನ್ನಿಗೆ ನಿಂತು ಸಹಕಾರ ಕೊಡುತ್ತೇನೆ ಕಮಾಂಡ್ ತೀರ್ಮಾನಕ್ಕೆ ನಾನು ಬದ್ಧ. ಲಕ್ಷಾಂತರ ಕಾರ್ಯಕರ್ತರು ಪಕ್ಷವನ್ನು ಬೆಂಬಲಿಸುತ್ತಾರೆ. ನನ್ನಂತೆ ನೂರಾರು ಜನ ಶ್ರಮ ವಹಿಸಿ ದುಡಿದಿದ್ದಾರೆ ಎಂದಿದ್ದಾರೆ.

ಇದಕ್ಕೂ ಮುನ್ನ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ್ದ ಡಿಕೆಶಿ, ಪಕ್ಷದಲ್ಲಿ ಎಲ್ಲಿಯೂ ಅಸಮಾಧಾನವಿಲ್ಲ. ಪಕ್ಷ ಸಂಘಟನೆ ಸೇರಿದಂತೆ ಪಕ್ಷದ ಹಾಗುಹೋಗುಗಳನ್ನು ಗಮನಿಸಲು ರಣದೀಪ್ ಸುರ್ಜೇವಾಲ ಅವರು ಭೇಟಿ ನೀಡಿದ್ದಾರೆ ಎಂದು ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಅವರ ಎದುರು ಶಾಸಕರು ಅಸಮಾಧಾನ ಹೇಳಿಕೊಂಡಿದ್ದಾರೆ ಎಂದು ಕೇಳಿದಾಗ, ಈಗಿನಿಂದಲೇ ಚುನಾವಣೆಗೆ ಹೇಗೆ ತಯಾರಿ ನಡೆಸಬೇಕು ಎಂಬುದು ಸೇರಿದಂತೆ ಜವಾಬ್ದಾರಿಗಳ ನಿರ್ವಹಣೆ ಹೇಗೆ ಮಾಡಬೇಕು ಎಂದು ಚರ್ಚೆ ನಡೆಸಲು, ಜವಾಬ್ದಾರಿ ವಹಿಸಲು ಸುರ್ಜೇವಾಲ ಅವರು ಬಂದಿದ್ದಾರೆ ಎಂದರು.

ಶಾಸಕ ಇಕ್ಬಾಲ್ ಹುಸೇನ್‌ಗೆ ನೋಟಿಸ್ ನೀಡಿರುವ ಬಗ್ಗೆ ಕೇಳಿದಾಗ, ಪಕ್ಷದಲ್ಲಿ ಶಿಸ್ತು ಮುಖ್ಯ. ಅವರಿಗೂ ನೋಟಿಸ್ ನೀಡುವೆ, ಬೇರೆಯವರಿಗೂ ನೋಟಿಸ್ ನೀಡಬೇಕಾಗುತ್ತದೆ. ನನ್ನ ಹೆಸರು ಹೇಳಿ, ನನ್ನನ್ನು ಸಿಎಂ



ಮಾಡಿ ಎಂದು ಹೇಳುವ ಅವಶ್ಯಕತೆಯಿಲ್ಲ. ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರು ಇರುವಾಗ ಬೇರೆ ಹೆಸರು ಏಕೆ? ಎಂದು ಪ್ರಶ್ನಿಸಿದರು.

ನೀವು ಪಕ್ಷ ಕಟ್ಟಲು ಕಷ್ಟಪಟ್ಟಿದ್ದೀರಿ, ಆ ಕಾರಣಕ್ಕೆ ನಿಮ ಹೆಸರು ಪ್ರಸ್ತಾಪಿಸಿದ್ದಾರೆ ಎಂದು ಕೇಳಿದಾಗ, ನಾನೊಬ್ಬನೆ ಪಕ್ಷ ಕಟ್ಟಿದ್ದೇನೆಯೇ? ನನ್ನಂತೆ ನೂರಾರು, ಸಾವಿರಾರು ಲಕ್ಷಾಂತರ ಜನ ಪಕ್ಷ ಕಟ್ಟಿದ್ದಾರೆ. ಮೊದಲು ಅವರ ನಂಬಿಕೆ ಉಳಿಸಿಕೊಳ್ಳೋಣ ಎಂದು ಹೇಳಿದರು. ಸಚಿವ ಸಂಪುಟ ಸಭೆ ವಿಚಾರವಾಗಿ ಕೇಳಿದಾಗ, ನಾಡಪ್ರಭು ಕೆಂಪೇಗೌಡರ ಮಾಗಡಿ ಸಾರಕ ಅಭಿವೃದ್ಧಿ ಸೇರಿದಂತೆ ಬೆಂಗಳೂರಿಗೆ ಒಂದಷ್ಟು ಚಿಕ್ಕಪುಟ್ಟ ನೀರಾವರಿ ಯೋಜನೆಗಳ ಅನುಷ್ಠಾನದ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಗುವುದು ಎಂದರು.ಕೋಲಾರ, ಚಿಕ್ಕಬಳ್ಳಾಪುರ ಭಾಗಕ್ಕೆ ಈಗಾಗಲೇ ಕುಡಿಯುವ ನೀರಿನ ಯೋಜನೆಗಳನ್ನು ನೀಡಿದ್ದೇವೆ. ಬೆಂಗಳೂರು ಗ್ರಾಮಾಂತರವನ್ನು ಬೆಂಗಳೂರು ಉತ್ತರ ಎಂದು ಮರುನಾಮಕರಣಕ್ಕೆ ಬೇಡಿಕೆ ಇಟ್ಟಿದ್ದಾರೆ. ಸಭೆಯಲ್ಲಿ ಇದನ್ನೂ ಪ್ರಸ್ತಾವನೆ ಮಾಡಲಾಗುವುದು ಎಂದು ಹೇಳಿದರು.ಬೆಂಗಳೂರು ಉತ್ತರ ಜಿಲ್ಲೆ ಮರುನಾಮಕರಣದ ಬಗ್ಗೆ ಪ್ರಶ್ನೆ ಕೇಳಿದಾಗ, ಈ ಮೊದಲು ಕನಕಪುರ, ಚನ್ನಪಟ್ಟಣ, ರಾಮನಗರ ಭಾಗಗಳು ಹಾಗೂ ನಾನು ಪ್ರತಿನಿಧಿಸಿದ್ದ ಜಿಲ್ಲಾ ಪಂಚಾಯತಿ ಸದಸ್ಯನಾಗಿದ್ದಾಗ ಬೆಂಗಳೂರು ಗ್ರಾಮಾಂತರ ಕ್ಷೇತ್ರವಾಗಿತ್ತು. ಬೆಂಗಳೂರು ದಕ್ಷಿಣ ಎಂದು ನಾಮಕರಣವಾದ ನಂತರ ಈ ಭಾಗದ ಶಾಸಕರ ಮನವಿ ಮೇರೆಗೆ ತೀರ್ಮಾನಕ್ಕೆ ಬರಲಾಗುವುದು ಎಂದು ಪ್ರತಿಕ್ರಿಯಿಸಿದರು.

# ದೀಕ್ಷೆ ಪ್ರತಿಯೊಬ್ಬರ ಜನ್ಮಸಿದ್ಧ ಹಕ್ಕು: ಕಾಶಿ ಜಗದ್ಗುರು



**ಕಲಬುರಗಿ:ಜು.2:** ದೀಕ್ಷೆಯು ಪ್ರತಿಯೋಬ್ಬ ಮನುಷ್ಯನ ಜನ್ಮ ಸಿದ್ಧ ಹಕ್ಕು ಎಂಬ ವಿಚಾರವನ್ನು ಶ್ರೀ ಕಾಶಿ ಜ್ಞಾನಸಿಂಹಾಸನಾಧೀಶ್ವರ ಜಗದ್ಗುರು ಡಾ.ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ನುಡಿದರು.

ಅವರು ನಗರದ ಸೊಗಸಗೇರಿಯ ಶ್ರೀ ಗುರುಶಾಂತಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಶ್ರೀ ಸಿದ್ಧಾಂತ ಶಿಖಾಮಣಿ ಮತ್ತು ವಚನ ಸಾಹಿತ್ಯ ಸಮನ್ವಯಾತ್ಮಕ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ, ಆಶೀರ್ವಚನದಲ್ಲಿ ದೀಕ್ಷಾ ಸಂಸ್ಕಾರವನ್ನು ಹೊಂದದೆ ಇಷ್ಟಲಿಂಗ ಪೂಜೆಯನ್ನು ಮಾಡುವ ಅಥವಾ ಮಹಾ ಮಂತ್ರದ ಜಪವನ್ನು ಮಾಡುವ ಅಧಿಕಾರವು ಯಾರಿಗೂ ಇರುವುದಿಲ್ಲ. ಅಂತೆಯೇ ಸನಾತನ ವೀರಶೈವ ಧರ್ಮದಲ್ಲಿ ಹೆಣ್ಣು ಗಂಡು ಎಂಬ ಭೇಧ ಭಾವ ಮಾಡದೆ ಪ್ರತಿಯೊಂದು ಮಕ್ಕಳಿಗೆ ಎಂಟನೇ ವರ್ಷಕ್ಕೆ ದೀಕ್ಷಾ ಸಂಸ್ಕಾರವನ್ನು ಕಡ್ಡಾಯಗೊಳಿಸಿದ್ದಾರೆ. ದೀಕ್ಷಾಪೂರ್ವಕವಾಗಿ ಬಂದ ಇಷ್ಟಲಿಂಗವನ್ನು ಶಿಷ್ಯರು ಪೂಜಿಸಬೇಕಾಗುತ್ತದೆ. ಲಿಂಗಪೂಜೆಯನ್ನು ಮಾಡುವುದಾಗಲಿ ಮಹಾಮಂತ್ರವನ್ನು ಜಪಿಸುವುದಾಗಲಿ ದೀಕ್ಷಾ ರಹಿತರಿಗೆ ಅಧಿಕಾರ ಇರುವುದಿಲ್ಲ. ಆದ್ದರಿಂದ ಎಲ್ಲಾ ಮಾನವರಿಗೆ ಈ ದೀಕ್ಷೆಯ ಅಧಿಕಾರವನ್ನು ಶ್ರೀ ಜಗದ್ಗುರು ಪಂಚಾಚಾರ್ಯರು ಅನುಗ್ರಹಿಸಿದ್ದಾರೆ. ದೀಕ್ಷೆ ಎಂದರೆ ಆಣವಾದಿ ಮಲಗಳನ್ನು ಕ್ಷಯಗೊಳಿಸುವ ಮತ್ತು ಶಿವ ಜ್ಞಾನವನ್ನು ಕೊಡುವ ದಿವ್ಯ ಸಂಸ್ಕಾರವೇ ದೀಕ್ಷೆಯು. ಈ ದೀಕ್ಷಾ ಸಂಸ್ಕಾರವು ಮೂರು ವಿಧವಾಗಿರುತ್ತದೆ. ಅವುಗಳೇ ವೇದಾದೀಕ್ಷೆ,

ಮಂತ್ರದೀಕ್ಷೆ ಹಾ ಗೂ ಕ್ರಿಯಾ ದೀಕ್ಷೆಗಳು ವೇದಾ ದೀಕ್ಷೆಯಿಂದ ಆಣವ ಮಲದ ನಿವೃತ್ತಿ, ಮಂತ್ರ ದೀಕ್ಷೆಯಿಂದ ಮಾ ಯಾ ಮಲದ ನಿವೃತ್ತಿ ಮತ್ತು ಕ್ರಿಯಾ ದೀಕ್ಷೆಯಿಂದ ಶುಭಾಶುಭ ವಾಸನಾ ರೂಪದ ಕಾರ್ಮಿಕ ಮಲದ ನಿವೃತ್ತಿ ಯಾಗುವುದು, ಈ ದೀಕ್ಷಾ ಸಂಸ್ಕಾರಕ್ಕೆ ತಮ್ಮ ವಂಶಕ್ಕೆ ಒಬ್ಬರೇ ಗುರು ಇರಬೇಕೆಂಬ ನಿಯಮವು ಇದೆ. ಇದುವೇ ಧರ್ಮದ ಸದಾಚಾರವು ಆದಕಾರಣ ವಂಶದ ಪ್ರತಿಯೊಬ್ಬರು ತಮ್ಮ ವಂಶ ಗುರುಗಳಿಂದಲೇ ದೀಕ್ಷಾ ಸಂಸ್ಕಾರವನ್ನು ಪಡೆದು ಸದಾ ಚಾರವನ್ನು ಪಾಲಿಸುತ್ತ ತಪ್ಪದೇ ಇಷ್ಟಲಿಂಗ ಪೂಜೆಯನ್ನು ಮಾಡಬೇ ಕು ಎಂದು ಶ್ರೀ ಸನ್ನಿಧಿ ನುಡಿದರು.

ಕಡಗಂಚಿಯ ವೀರಭದ್ರ ಶಿವಾಚಾರ್ಯರಿಗೆ ಅವರ ಶಿಷ್ಯರಾದ ಶ್ರೀಮತಿ ಗೌರಮ್ಮ ಶಿವಾನಂದ ಸ್ಥಾವರಮಠ ರುದ್ರಾಕ್ಷಿ ಕೀರಿಟವನ್ನು ಅರ್ಪಿಸಿದರು. ಶಖಾಪೂರ ತಪೋವನಮಠದ ಡಾ.ಸಿದ್ಧರಾಮ ಶಿವಾಚಾರ್ಯರು, ಜೇವರ್ಗಿ (ಬಿ) ಜೈಗುರುಶಾಂತ ಲಿಂಗಾರಾಧ್ಯ ಶಿವಾಚಾರ್ಯರು, ಚೌದಾಪೂರಿ ಹಿರೇಮಠದ ರಾಜಶೇಖರ ಶಿವಾಚಾರ್ಯರು ಮಾತನಾಡಿದರು. ಪಾಳಾದ ಡಾ. ಗುರುಮೂರ್ತಿ ಶಿವಾಚಾರ್ಯರು, ಚಂದನಕೇರಾ, ಬಾರ್ಶಿ, ಸುಲೇಪೇಟ ಕಡಗಂಚಿ ಶ್ರೀಗಳು ಇದ್ದರು. ಆಳಂದ ತಾಲೂಕಿನ ಮಾಜಿ ಶಾಸಕರಾದ ಸುಭಾಷ ಗುತ್ತೇದಾರ ಮಾತನಾಡಿದರು. ಶಿವಶರಣಪ್ಪ ಸಿರಿ ವೇದಿಕೆಯ ಮೇಲೆ ಇದ್ದರು. ಗುರುಲಿಂಗಯ್ಯ ಹಿತ್ತಲಶಿರೂರ ಮಹಾಂತಯ್ಯ ಸ್ವಾಮಿ ನಿಂಗದಳ್ಳಿ ಇವರಿಂದ ಸಂಗೀತ ಜರುಗಿತು. ಈ.ಕೆ.ಎಸ್.ಆರ್.ಟಿ.ಸಿ ಮಾಜಿ ನಿರ್ದೇಶಕರಾದ ಮಲ್ಲಿಕಾರ್ಜುನ ತಡಕಲ್ ಸರ್ವರನ್ನು ಸ್ವಾಗತಿಸಿದರು. ಯುವ ಸಾಹಿತಿ ಶಿವಯ್ಯ ಮಠಪತಿ ನಿರೂಪಿಸಿದರು.

# ಅನುದಾನವಿಲ್ಲದೆ ಕ್ಷೇತ್ರದಲ್ಲಿ ಮುಖ ತೋರಿಸಲಾಗುತ್ತಿಲ್ಲ : ಅಶೋಕ್ ಕಿಡಿ



**ಬೆಂಗಳೂರು,ಜು.2–** ನಯಾ ಪೈಸೆ ಅನುದಾನವಿಲ್ಲದೆ ತಮ್ಮ ತಮ ಕ್ಷೇತ್ರಗಳಿಗೆ ಹೋಗಲೂ ಮುಖ ಇಲ್ಲ ಎಂದು ಶಾಸಕರು ಅಸಹಾಯಕತೆಯನ್ನು ಹಂಚಿಕೊಂಡಿದ್ದಾರೆ.ಇನ್ನೆಷ್ಟು ದಿನ ಸ್ವಾಮಿ ಈ ಭಂಡ ಬಾಳು? ರಾಜೀನಾಮೆ ಕೊಟ್ಟು ತಮ ಹಾಗೂ ಕರ್ನಾಟಕದ ಗೌರವವನ್ನೂ ಉಳಿಸಿಕೊಳ್ಳಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ್ ಬಹಿರಂಗ ಸವಾಲು ಹಾಕಿದ್ದಾರೆ.

ಈ ಕುರಿತು ತಮ್ಮ ಸಾಮಾಜಿಕ ಜಾಲ ತಾಣ ಎಕ್ಸ್ ನಲ್ಲಿ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, ಲಾಟರಿ ಸಿಎಂ ಸಿದ್ದರಾಮಯ್ಯ ನವರೇ ಎಂದು ಕುಹಕವಾಡಿರುವ ಅಶೋಕ್, ಹೈಕಮಾಂಡ್ ಏಜೆಂಟ್ ರಣದೀಪ್ ಸಿಂಗ್ ಸುರ್ಜೇವಾಲ ಅವರ ಬಳಿ ನಿಮ ಶಾಸಕರು ಸಾಲು ಸಾಲು ದೂರುಗಳನ್ನು ಕೊಡುತ್ತಿದ್ದಾರೆ. ನಿಮ ಕಾಂಗ್ರೆಸ್ ಸರ್ಕಾರದ ಆಡಳಿತ ತೃಪ್ತಿ ತಂದಿಲ್ಲ ಎಂದು ಅಳಲು ತೋಡಿಕೊಂಡಿದ್ದಾರೆ.

ಎಲ್ಲ ಇಲಾಖೆಗಳಲ್ಲಿ ಲಂಚ, ಭ್ರಷ್ಟಾಚಾರ ನಡೆಯುತ್ತಿದೆ ಎಂದು ನಿಮ ಸರ್ಕಾರದಲ್ಲಿ ನಡೆಯುತ್ತಿರುವ ಹಗಲು ದರೋಡೆಯನ್ನು ಬಯಲು ಮಾಡುತ್ತಿದ್ದಾರೆ. ಸಚಿವರು ಶಾಸಕರನ್ನು ಭೇಟಿ ಕೂಡ ಮಾಡುತ್ತಿಲ್ಲ ಎಂದು ಸಚಿವರ ಕಾರ್ಯವೈಖರಿ ಬಗ್ಗೆ ದೂರು ನೀಡಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಮಾಧ್ಯಮಗಳ ಮುಂದೆ ಕೈ ಕೈ ಹಿಡಿದು ಒಗ್ಗಟ್ಟು ಪ್ರದರ್ಶನದ ನಾಟಕ, ತೆರೆಮರೆಯಲ್ಲಿ ಬೆಂಬಲಿಗರ ಮೂಲಕ ಬೆನ್ನಿಗೆ ಚೂರಿ ಇರಿತ.

ಒಟ್ಟಿನಲ್ಲಿ ಗಂಡ ಹೆಂಡತಿ ಜಗಳದಲ್ಲಿ ಕೂಸು ಬಡವಾಯಿತು ಎಂಬಂತೆ, ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಅವರ ಜಗಳದಲ್ಲಿ ಕರ್ನಾಟಕ ಬಡವಾಗುತ್ತಿದೆ. ಮಗು ಚಿವುಟೋದು ಅವರೇ ತೊಟ್ಟಿಲು ತೂಗೋದು ಅವರೇ ಎಂದು ವ್ಯಂಗ್ಯವಾಡಿದ್ದಾರೆ. ನಿಮ ಪಕ್ಷದ ಶಾಸಕರೇ ನಿಮ ಸರ್ಕಾರಕ್ಕೆ ಥೀ ಥೂ ಎಂದು ಉಗಿಯುತ್ತಿದ್ದಾರೆ. ಹೈಕಮಾಂಡ್ ಏಜೆಂಟ್ ಸುರ್ಜೇವಾಲ ಅವರಿಗೆ ಒಂದೆರಡು ಸೂಟ್ ಕೇಸ್ ಕೊಟ್ಟು ಸುಮನಾಗಿಸಬಹುದು. ಹೈಕಮಾಂಡ್‌ಗೆ ಭರಪೂರ ಕಪ್ಪ ಕಾಣಿಕೆ ಕೊಟ್ಟು ಬುಟ್ಟಿಗೆ ಹಾಕಿಕೊಳ್ಳಬಹುದು. ಶಾಸಕರಿಗೆ ಹೆದರಿಸಿ, ಬೆದರಿಸಿ ಅವರ ಬಾಯಿ ಮುಚ್ಚಿಸಬಹುದು.

ಆದರೆ ಜನಸಾಮಾನ್ಯರ ಬಾಯಿ ಹೇಗೆ ಮುಚ್ಚಿಸುತ್ತೀರಿ ಇನ್ನಾದರೂ ಈ ಭಂಡ ಬಾಳು ಸಾಕು ಮಾಡಿ. ರಾಜೀನಾಮೆ ಕೊಟ್ಟು ಈ ನಾಟಕಕ್ಕೆ ತೆರೆ ಎಳೆಯಿರಿ.ಲಾಟರಿ ಮುಖ್ಯಮಂತ್ರಿ; ಪಾಪರ್ ಸರ್ಕಾರ ಎಂದು ಆಶೋಕ್ ಅವರು ಟೀಕಾ ಪ್ರಹಾರನಡೆಸಿದ್ದಾರೆ.

# ಜೂಜಾಟ: 7 ಜನರ ಬಂಧನ

**ಕಲಬುರಗಿ,ಜೂ.2–**ನಗರದ ಆಳಂದ ರಸ್ತೆಯ ಪಟ್ಟಣ ಟೋಲ್‌ನಾಕ್ ಹತ್ತಿರದ ಹೊಲ ಒಂದರಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಬ್ ಅರ್ಬನ್ ಪೊಲೀಸ್ ಠಾಣೆ ಪಿಐ ಸಂತೋಷ ತಟ್ಟೆಪಳ್ಳಿ, ಸಿಬ್ಬಂದಿಗಳಾದ ಮಂಜುನಾಥ, ಫಿರೋಜ್, ಶಶಿಕಾಂತ, ಗುಂಡೆರಾವ ಅವರು ದಾಳಿ ನಡೆಸಿ 7 ಜನರನ್ನು ಬಂಧಿಸಿದ್ದಾರೆ.

ರಾಜೇಂದ್ರ ಪಾಟೀಲ ದಣ್ಣೂರ, ಸುಲ್ತಾನ ವಗದರಗಿ, ಸಿದ್ದಣ್ಣ ದೊಡ್ಡಮನಿ, ಗುರುಲಿಂಗಪ್ಪ ಪಾಟೀಲ, ರಾಚಣ್ಣ ಸನಗುಂದಿ, ಶಿವಶರಣಪ್ಪ ಮಾಲಿಪಾಟೀಲ, ಗಫುರಸಾಬ ಅನ್ಸಾರಿ ಎಂಬುವವರನ್ನು ಬಂಧಿಸಿ 4630 ರೂ.ನಗದು, 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಯುವ ಮಾರ್ಗ

ಗುರುವಾರ : 03–07–2025

## ಡಾ.ಫ.ಗು.ಹಳಕಟ್ಟಿಯವರ ಕೊಡುಗೆ ಅವಿಸ್ಮರಣೀಯ



**ಕಲಬುರಗಿ,ಜು.2**–ಇಡೀ ವಿಶ್ವದಲ್ಲಿಯೇ ಅದ್ಭುತವಾದ, ಬದುಕನ್ನು ಕಟ್ಟಿಕೊಡುವ ಶ್ರೇಷ್ಠವಾದ ವಚನ ಸಾಹಿತ್ಯವನ್ನು ಸಂರಕ್ಷಿಸಿ, ಮುಂದಿನ ಪೀಳಿಗೆಗೆ ಅಮೂಲ್ಯವಾದಈ ಸಂಪತ್ತನ್ನು ದೊರೆಯುವಂತೆ ಮಾಡಿದ ವಚನಶಾಸ್ತ್ರ ಪಿತಾಮಹ ಡಾ.ಫ.ಗು.ಹಳಕಟ್ಟಿಯವರ ಕೊಡುಗೆ ಅವಿಸ್ಮರಣೀಯವಾಗಿದೆಯೆಂದು ಪ್ರಾಚಾರ್ಯ ರವೀಂದ್ರಕುಮಾರ ಸಿ.ಬಟಗೇರಿ ಹೇಳಿದರು.

ಜೇವರ್ಗಿ ಪಟ್ಟಣದ ಬಸವೇಶ್ವರ ವೃತ್ತದ ಸಮೀಪವಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ ಜರುಗಿದ 'ಡಾ.ಫ.ಗು.ಹಳಕಟ್ಟಿಯವರ 145ನೇ ಜನ್ಮದಿನ–ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯಲ್ಲಿ ಅವರು ಮಾತನಾಡುತ್ತಿದ್ದರು.

ಉಪನ್ಯಾಸಕ, ಶರಣ ಚಿಂತಕ ಎಚ್.ಬಿ.ಪಾಟೀಲ ಮಾತನಾಡಿ, ಹಳಕಟ್ಟಿಯವರ ಸ್ಮರಣೆಯಲ್ಲಿಯೇ ಒಂದು ದೊಡ್ಡ ಅನುಭಾವವಿದೆ. ಅಂದಿನ ಕ್ಲಿಷ್ಟಕರ ಪರಿಸ್ಥಿಯಲ್ಲಿ ವಿನಾಶದ ಅಂಚಿನಲ್ಲಿದ್ದ ವಚನಗಳ ಹಸ್ತಪ್ರತಿಗಳನ್ನು ಸಂರಕ್ಷಿಸಿ, ಪ್ರಕಟಿಸಿ, ಪ್ರಚಾರಗೊಳಿಸುವ ಮೂಲಕ ಇಂತಹ ಅಮೂಲ್ಯವಾದ ವಚನ ಸಂಪತ್ತನ್ನು ನಮಗೆ ದೊರೆಯುವಂತೆ ಮಾಡುವ ಮೂಲಕ ಬಹುದೊಡ್ಡ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಮಹನೀಯರ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸುತ್ತಿರುವುದು ಉತ್ತಮ ಸಂಗತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ಅಸ್ಮಾ ಜಬೀನ್, ಸುವರ್ಣಲತಾ ಭಂಡಾರಿ, ಮಲ್ಲಿಕಾರ್ಜುನ ದೊಡ್ಡಮನಿ, ಶಂಕ್ರೆಪ್ಪ ಹೊಸದೊಡ್ಡಿ,ಮಲ್ಲಪ್ಪ ರಂಜಣಗಿ, ಗ್ರಂಥಪಾಲಕ ಲಿಂಗರಾಜ ಹಿರೇಗೌಡ, ಪ್ರದಸ ಪ್ರೇಮಾ ಸುರಪುರ, ಅತಿಥಿ ಉಪನ್ಯಾಸಕರಾದ ನಾರಾಯಣಸ್ವಾಮಿ, ಅಲೀಯಾ ತಬಸ್ಸುಮ್, ಸೇವಕ ಭಾಗಣ್ಣ ಹರನೂರ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ವಚನಗಳು ಬದುಕಿಗೆ ದಾರಿದೀಪ : ಪಟ್ಟದ್ದೇವರು



**ಭಾಲ್ಕಿ,ಜು.2**–ಸುಂದರ ಬದುಕಿಗೆ ದಾರಿ ದೀಪವಾಗಿರುವ ವಚನಗಳನ್ನು ಪ್ರತಿಯೊಬ್ಬರು ಅರ್ಥೈಸಿಕೊಳ್ಳಬೇಕು ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಬ್ಯಾಲಹಳ್ಳಿ(ಡಬ್ಲ್ಯೂ) ಗ್ರಾಮದಲ್ಲಿ ಶರಣ ಸಾಹಿತ್ಯ ಪರಿಷತ್ತು ಮತ್ತು ಕದಳಿ ಮಹಿಳಾ ವೇದಿಕೆ ಬೀದರ್ ಸಹಯೋಗದಲ್ಲಿ ಮಂಗಳವಾರ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಂಪಾದಿಸಿದ ವಚನಾಮೃತ ಗ್ರಂಥ ಬಿಡುಗಡೆ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ವಚನಗಳಲ್ಲಿ ಬದುಕಿನ ಸಾರ ಅಡಗಿದೆ. ಪ್ರತಿಯೊಬ್ಬರು ಪ್ರತಿದಿನ ನಾಲ್ಕೈದು ವಚನ ಪಠಣ ಮಾಡಿದರೆ ಬದುಕು ಸುಂದರವಾಗಿ ರೂಪಗೊಳ್ಳಲಿದೆ ಎಂದು ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಗ್ರಂಥ ಪರಿಚಯ ಮಾಡಿಕೊಟ್ಟರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ವಚನಾಮೃತ ಗ್ರಂಥ ಬಿಡುಗಡೆಗೊಳಿಸಿದರು.ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ನೇತೃತ್ವ ವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರಂಥ ದಾಸೋಹಿಗಳಾದ ಸೋಮನಾಥ ಪಾಟೀಲ್, ಹಿರಿಯ ಸಾಹಿತಿ ವೀರಣ್ಣ ಕುಂಬಾರ ಸೇರಿದಂತೆ ಹಲವರು ಇದ್ದರು. ಮಂಗಲಾ ಸೋಮನಾಥ ಪಾಟೀಲ್ ಸ್ವಾಗತಿಸಿದರು. ರಾಜು ಜುಬರೆ ನಿರೂಪಿಸಿ ವಂದಿಸಿದರು.

## ಪ್ರಾಚಾರ್ಯ ವೆಂಕಟೇಶ ವಯೋನಿವೃತ್ತಿ ನಿವೃತ್ತಿ ಜೀವನ ಸುಖಕರವಾಗಿರಲಿ–ಲೋಕರೆಡ್ಡಿ

ಯುವ ಮಾರ್ಗ ಸುದ್ದಿ



**ಸಿರವಾರ, ಜು.02**– ಒಬ್ಬ ವ್ಯಕ್ತಿ ಸರ್ಕಾರಿ ಈ ಇಲಾಖೆಗೆ ಕೆಲಸಕ್ಕೆ ಸೇರಿದಾಗ ಅವರು ನಿವೃತ್ತಿಯಾಗುತ್ತೆವೆಂದು ಮೊದಲೆ ತಿಳಿದಿರು. ವೃತ್ತಿಗೆ ಗೌರವ ಕೊಟ್ಟು ಒಳ್ಳೆಯ ಕೆಲಸಗಳನ್ನೆ ಜಿ. ಮಾಡುತ್ತಾರೆ. ಪ್ರಾಚಾರ್ಯರಾಗಿ ಕಾರ್ಯನಿರ್ವಹಿಸಿ – ವಯೋನಿವೃತ್ತಿಯಾದ ವೇಂಕಟೇಶನವಲಕಲ್ ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ವಾಣಿಜ್ಯೋದ್ಯಮಿ ಜಿ. ಲೋಕರೆಡ್ಡಿ ಹೇಳಿದರು.

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನ ಎಂದರು. ಪ್ರಾಚಾರ್ಯರಾದ ವೆಂಕಟೇಶ ನವಲಕಲ್ ಇವರು ಸೋಮವಾರ ಸೇವೆಯಿಂದ ನಿವೃತ್ತಿ ಹೊಂದಿದರಿಂದ ಅವರಿಗೆ ಕಾಲೇಜಿನಿಂದ ಹಮ್ಮಿಕೊಂಡಿದ ಬಿಳ್ಕೊಡುಗೆ ಕಾರ್ಯಕ್ರಮದ ಅತಿಥಿಯಾಗಿ ಮಾತನಾಡಿದ ಅವರು ಶಿಕ್ಷಕ–ಉಪನ್ಯಾಸಕರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವವರಾಗಿದೆ. ನಿಷ್ಪಕ್ಷಪಾತವಾಗಿ ಪಾಠ ಮಾಡುತ್ತಾರೆ. ಅನೇಕ ವಿದ್ಯಾರ್ಥಿಗಳು ಇವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿ, ಉತ್ತಮ ಜೀವನ ರೂಪಿಸಿಕೊಂಡಿದ್ದಾರೆ. ಸರ್ಕಾರಿ ಕೆಲಸದಲ್ಲಿ ಕೊನೆಗೆ ನಾವು ಮಾಡಿದ ಒಳ್ಳೆಯ ಕೆಲಸಗಳು ತೃಪ್ತಿ ನೀಡುತ್ತವೆ. ಇಂದು ಸರ್ಕಾರ ಜಾರಿಗೆ ತಂದಿರುವ ಯೋಜನೆಗಳನ್ನು ಸರಿಯಾಗಿ ತಲುಪಿಸುವಲಿ, ಮಾಹಿತಿ ನೀಡುವಲ್ಲಿ, ಇತ್ತರೆ ಕೆಲಸಕ್ಕೆ ಉದ್ಯೋಗಸ್ಥರು ನಲಗಿಹೋಗಿ ಕೇಲವರು ಅವಧಿ ಮುಂಚೆನೆ ನಿವೃತ್ತಿ ಪಡೆದುಕೊಳ್ಳುತ್ತಾರೆ. 25 ಕೂ ಅದಿಕ ವರ್ಷ ವೃತ್ತಿ ಜೀವನದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲದೆ ಸೇವೆ ಮಾಡಿರುವ ಅವರ ಮುಂದಿನ ಜೀವನ ಸುಖಕರವಾಗಿರಲಿ ಎಂದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಭಾರಿ ಪ್ರಾಚಾರ್ಯರಾದ ಹನುಮಂತ ಚೆನ್ನೂರು, ಪಟ್ಟಣ ಪಂಚಾಯತಿ ಅಧ್ಯಕ್ಷ ವೈ.ಭೂಪನಗೌಡ, ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಆರಿಫ್ ಮಿಯಾ, ಜಿ.ವೀರೇಶ, ಚುಕ್ಕಿ ಉಮಾಪತಿ, ಅಮರೇಶ ನಂದರಡ್ಡಿ, ಉಪನ್ಯಾಸಕರು, ವಿದ್ಯಾರ್ಥಿಗಳು ಸನ್ಮಾನಿಸಿದರು.

## ಪತ್ರಿಕಾ ದಿನಾಚರಣೆ ಪೂರ್ವಭಾವಿ ಸಭೆ



ಯುವ ಮಾರ್ಗ ಸುದ್ದಿ

**ದೇವದುರ್ಗ,ಜು.2**– ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಬಾಬುಕಲಿ ಕರಿಗುಡ್ಡ ಅಧ್ಯಕ್ಷತೆಯಲ್ಲಿ ಸಂಘದ ಪೂರ್ವಭಾವಿ ಸಭೆ ಮಂಗಳವಾರ ಜರುಗಿತು.ಜಿಲ್ಲಾ ಹಾಗೂ ತಾಲೂಕು ಮಟ್ಟದ ಪತ್ರಿಕಾ ದಿನಾಚರಣೆ ಆಚರಣೆ ಹಾಗೂ ಉತ್ತಮ ಪತ್ರತರ್ಕರು ಪ್ರಶಸ್ತಿಗೆ ಐವರನ್ನು ಒಮ್ಮತದಿಂದ ಆಯ್ಕೆ ಮಾಡಲಾಯಿತು.

ತಾಲೂಕು ಅಧ್ಯಕ್ಷ ಬಾಬುಅಲಿ ಕರಿಗುಡ್ಡ ಮಾತನಾಡಿ, ಜೂಲೈ ಮೂರನೇ ವಾರದಲ್ಲಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪತ್ರಿಕಾ ದಿನಾಚರಣೆ ನಡೆಯಲಿದೆ. ಅತ್ಯುತ್ತಮ ವರದಿಗಾರಿಕೆಗೆ ಕೊಡಮಾಡುವ ಜಿಲ್ಲಾ ಮಟ್ಟದ ಪತ್ರಿಕಾ ಪ್ರಶಸ್ತಿಗೆ ವಿಜಯವಾಣಿ ದೇವದುರ್ಗ ತಾಲೂಕು ವರದಿಗಾರ ಅಮರೇಶ ಚಿಲ್ಕರಾಗಿ ಅವರನ್ನು ಒಮ್ಮದಿಂದ ಆಯ್ಕೆ ಮಾಡಲಾಗಿದೆ. ಜಿಲ್ಲಾ ಮಟ್ಟದ ಪತ್ರಿಕಾ ದಿನಾಚರಣೆಯಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ಜುಲೈ 20ರೊಳಗೆ ತಾಲೂಕು ಮಟ್ಟದ ಪತ್ರಕರ್ತರ ದಿನಾಚರಣೆ ಕಾರ್ಯಕ್ರಮ ನಡೆಸಲು ತೀರ್ಮಾನ ಮಾಡಲಾಗಿದೆ. ನಾಲ್ವರು ಪತ್ರಕರ್ತರಿಗೆ ತಾಲೂಕು ಮಟ್ಟದ ದುರ್ಗದ ಸಿರಿ ಪ್ರಶಸ್ತಿ ನೀಡಲಾಗುವುದು. ವಿಜಯವಾಣಿ ಅರಕೇರಾ ವರದಿಗಾರ ಮಹಾಂತೇಶಹಿರೇಮಠ,ಬಿಸಿಲವಾಣಿ ಸಂಪಾದಕ ನಾಗರಾಜ ಮನ್ನಾಪುರ, ವರದಿಗಾರರಾದ ಸಚ್ಚಿದಾನಂದ ನಾಯಕ, ನಿರಂಜನ್ ಮಸರಕಲ್

ಅವರನ್ನು ಆಯ್ಕೆ ಮಾಡಲಾಗಿದೆ. ಕಾರ್ಯಕ್ರಮವನ್ನು ಶಾಸಕ ಕರೆಮ್ಮ ಜಿ.ನಾಯಕಉದ್ಘಾಟನೆ ಮಾಡಲಿದ್ದಾರೆ. ಸಂಘದ ಜಿಲ್ಲಾಧ್ಯಕ್ಷ ಆರ್. ಗುರುನಾಥ, ಜಿಲ್ಲಾ ಕಾರ್ಯದರ್ಶಿ ಪಾಷಾ ಹಟ್ಟಿ, ರಾಜ್ಯಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ, ತಾಲೂಕು ಅಧ್ಯಕ್ಷ ಬಾಬುಆಲಿ ಕರಿಗುಡ್ಡ, ಕಾರ್ಯದರ್ಶಿ ನಾಗರಾಜ ಸುಟ್ಟಿ, ಜಿಲ್ಲಾ ಸಮಿತಿ ಸದಸ್ಯರಾದ ಸೂಗೂರೇಶ ಗುಡಿ, ಅಲಿಬಾಬ ಪಟೇಲ್ ಸೇರಿ ಇತರರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಪಟ್ಟಣದ ಖೇಗೇದ್ ಫಂಕ್ಷನ್ ಹಾಲ್‌ನಲ್ಲಿ ಕಾರ್ಯಕ್ರಮ ನಡೆಯಲಿ ದೆ. ಜನರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ ಮಾಡಿದರು. ನಾಗರಾಜ್ ಸುಟ್ಟಿ, ಜಿಲ್ಲಾ ಸಮಿತಿ ಸದಸ್ಯ ಸೂಗೂರೇಶ್ವರ ಗುಡಿ, ಹಿರಿಯ ಪತ್ರಕರ್ತ ರಾದ ನರಸಿಂಗ್‌ರಾವ್ ಸರ್ಕೀ ಲ್, ಬಸನಗೌಡ ದೇಸಾಯಿ, ಮಲ್ಲೇಶ ವಾಾಶೆಟ್ಟಿ, ಬೆಳ್ಳೆಪ್ಪ ಬಲ್ಲಿದವ್. ಬೂದಯ್ಯಸ್ವಾಮಿ, ನಾಗರಾಜ ತೇಲ್ಕರ್, ಮಾರ್ಕಂಡಯ್ಯನಾಡದಾಳ, ಸುರೇಶ ಗೌಡ ವಟಗಲ್, ಗುರುನಾಥ ಇಂಗಳದಾಳ, ಆನಂದ ಗುಡಿ. ಶಿವರಾಜ ಜಗ್ಲಿ, ರಂಗನಾಥ ಜಗ್ಲಿ ಇತರರಿದ್ದರು.

## ಫಿಸಿಕ್ಸ್ ವಾಲಾ ತರಬೇತಿ ಕೇಂದ್ರದ ಶಾಖೆ ಉದ್ಘಾಟನೆ

**ಕಲಬುರಗಿ,ಜು.2**– ನೀಟ್ ಮತ್ತು ಜೆಇಇ ತರಬೇತಿಯ ಭಾರತದ ನಂಬರ್ ಒನ್ ಸಂಸ್ಥೆಯಾದ ಫಿಸಿಕ್ಸ್ ವಾಲಾ ತರಬೇತಿ ಕೇಂದ್ರದ ಶಾಖೆಯು ಕಲಬುರಗಿಯಲ್ಲಿ ನೂತನವಾಗಿ ಪ್ರಾರಂಭಿಸಲಾಯಿತು.

ನಗರದ ಓಲ್ಡ್ ಜೇವರ್ಗಿ ರಸ್ತೆಯ ಬಳಿ ಇರುವ ಸಂಜೀವಿನಿ ಕಾಂಪ್ಲೆಕ್ಸ್ ನ ವಿದ್ಯಾಪೀಠ ಪಾಠಶಾಲಾದಲ್ಲಿ ನೂತನವಾಗಿ ಸ್ಥಾಪಿಸಲಾದ ನೀಟ್ ಮತ್ತು ಜೆಇಇ ತರಬೇತಿಯ ಭಾರತದ ನಂಬರ್ ಒನ್ ಸಂಸ್ಥೆಯಾದ ಫಿಸಿಕ್ಸ್ ವಾಲಾ ತರಬೇತಿ ಕೇಂದ್ರವನ್ನು ಅಫಜಲಪುರ ಶಾಸಕ ಎಂ.ವೈ ಪಾಟೀಲ್ ಅವರು ಉದ್ಘಾಟಿಸಿದರು.

ಶಾಸಕ ಎಂ ವೈ ಪಾಟೀಲ್, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್ ಹಾಗೂ ಅನೇಕ ಜನ ಗಣ್ಯರು, ನೀಟ್ ಮತ್ತು ಜೆಇಇ ತರಬೇತಿಯ ಭಾರತದ ನಂಬರ್ ಒನ್ ಸಂಸ್ಥೆಯಾದ ಫಿಸಿಕ್ಸ್ ವಾಲಾ ತರಬೇತಿ ಕೇಂದ್ರವು ಕಲ್ಬುರ್ಗಿಯಲ್ಲಿ ಪ್ರಾರಂಭವಾಗಿದ್ದು ಸಂತೋಷದ ಸಂಗತಿ. ಈ ಭಾಗದ ವಿದ್ಯಾರ್ಥಿಗಳಿಗೆ ಇದು ತುಂಬಾ ಸಹಕಾರ



ವಾಗಲಿದೆ ಎಂದು ಹರ್ಷ ವ್ಯಕ್ತಪಡಿಸಿದ್ದರು.

ಈ ಸಂಧರ್ಭದಲ್ಲಿ ಪಾಲಿಕೆ ಸದಸ್ಯ ರಾಜು ದೇವದುರ್ಗ, ಡಾ.ಅಲ್ಲಮಪ್ರಭು ದೇಶಮುಖ, ಕಲಬುರಗಿ ಶಾಖೆಯ ಮುಖ್ಯಸ್ಥರಾದ ಆನಂದ ಶೇರಿಕರ್, ಚಂದು ದೇಸಾಯಿ, ಅಂಬ್ರೇಶ್ ಪಾಟೀಲ್, ಶರಣಪ್ಪ ಶೆಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪರೀಕ್ಷಾ ಪೂರ್ವ ತರಬೇತಿ

**ರಾಯಚೂರು,ಜು.2**–ಇಲ್ಲಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿಗೆ ಪ್ರತಿಷ್ಠಿತ ಸಂಸ್ಥೆಗಳ ಮೂಲಕ ಯು.ಪಿ.ಎಸ್.ಸಿ ನಾಗರೀಕ ಸೇವೆ, ಕೆ.ಎ.ಎಸ್ ಗೆಜೆಟೆಡ್ ಪ್ರೊಬೇಷನರ್, ಗ್ರೂಪ್–ಸಿ, ಆರ್.ಆರ್.ಬಿ ಮತ್ತು ಎಸ್.ಎಸ್.ಸಿ ಪರೀಕ್ಷಾ ಪೂರ್ವತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಸೇವಾಸಿಂಧು ಪೋರ್ಟಲ್ ವೆಬ್‌ಸೈಟ್ ವಿಳಾಸ: https://sevasindhu.karnataka.gov.in ನಲ್ಲಿ ಆಗಸ್ಟ್ 02ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ: 8277799990ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಎನ್.ಎಸ್.ಭೋಸರಾಜು ರಾಯಚೂರ ಜಿಲ್ಲಾ ಪ್ರವಾಸ

**ರಾಯಚೂರು,ಜು.2**– ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಭೋಸರಾಜು ಅವರು ಜುಲೈ 5ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲೆಯ ಮಾನ್ವಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುವ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗಿಯಾಗಿ, ನಂತರ ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರೊಂದಿಗೆ ವಿವಿಧ ಗ್ರಾಮಗಳಿಗೆ ಭೇಟಿ ನೀಡುವರು. ಸಂಜೆ 7 ಗಂಟೆಗೆ ರಾಯಚೂರಿಗೆ ಆಗಮಿಸಿ ವಾಸ್ತವ್ಯ ಹೂಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಧಾನಮಂತ್ರಿ ಆವಾಸ್ ಯೋಜನೆಗೆ ಮಾನವಿ ಪುರಸಭೆಯಿಂದ ಅರ್ಜಿ ಆಹ್ವಾನ

**ರಾಯಚೂರು,ಜು.2**– ಜಿಲ್ಲೆಯ ಮಾನ್ವಿ ಪುರಸಭೆಯಿಂದ 2025–26ನೇ ಸಾಲಿನ ನಗರ ಪ್ರದೇಶಗಳಲ್ಲಿ ಪ್ರಧಾನ ಮಂತ್ರಿ ಆವಾಸ್ (ನಗರ) 2.0 ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಯೋಜನೆಗೆ ಒಂಟಿ ಮಹಿಳೆಯರು, ಅಂಗವಿಕಲರು, ಹಿರಿಯ ನಾಗರೀಕರು, ತೃತೀಯ ಲಿಂಗಿಗಳು, ಎಸ್.ಸಿ/ ಎಸ್‌ಟಿ/ ಹಿಂದುಳಿದ, ಅಲ್ಪಸಂಖ್ಯಾತ ವರ್ಗದವರು, ಸ್ವಚ್ಛತಾ ಕಾರ್ಮಿಕರು, ಪಿ.ಎಮ್.ಸ್ವಾನಿಧಿ ಯೋಜನೆಯಡಿ ಗುರುತಿಸಲ್ಪಟ್ಟ ಬೀದಿ ವ್ಯಾಪಾರಿಗಳು ಮತ್ತು ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯಡಿ ಗುರುತಿಸಿದ ಕುಶಲ ಕರ್ಮಿಗಳು, ಅಂಗನವಾಡಿ ಕಾರ್ಯಕರ್ತರು, ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಕೈಗಾರಿಕರು, ವಲಸೆ ಬಂದ ಕುಟುಂಬದವರು ಆಧಾರ್ ಕಾರ್ಡ್, ವಸತಿ ರಹಿತರಾದಲ್ಲಿ ನಿವೇಶನಕ್ಕೆ ಸಂಬಂಧಿಸಿದ ದಾಖಲೆಗಳು ( ಕ್ರಯ ಪತ್ರ / ದಾನಪತ್ರ / ಉಡುಗೊರೆ ಪತ್ರ / ಖಾತಾ ಉತಾರ), ಜಾತಿ ಮತ್ತು ಆದಾಯ ಪ್ರಮಾಣ ಪತ್ರ., ಪಡಿತರ ಚೀಟಿ, ಬ್ಯಾಂಕ್ ಪಾಸ್ ಬುಕ್ ಪ್ರತಿ, ನಿಗಧಿತ ನಮೂನೆ ಅರ್ಜಿ, ಮೊಬೈಲ್ ಸಂಖ್ಯೆ ಹಾಗೂ ಪ್ಯಾನ್‌ಕಾರ್ಡ್ (ಲಭ್ಯವಿದ್ದಲ್ಲಿ ಮಾತ್ರ) ನೊಂದಿಗೆ ಅರ್ಜಿಗಳನ್ನು https://pmay-urban.gov.in ನಲ್ಲಿ ಜುಲೈ 15ರೊಳಗಾಗಿ ಸಲ್ಲಿಸಿ, ಈ ಕಾರ್ಯಾಲಯಕ್ಕೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದಂತಹ ಅರ್ಜಿಗಳನ್ನು ಪರಿಗಣೀಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಶಾಖೆಯ ಅಧಿಕಾರಿಗಳನ್ನು ಕಛೇರಿಯ ವೇಳೆಯಲ್ಲಿ ಸಂಪರ್ಕಿಸುವಂತೆ ಮಾನ್ವಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿದ್ದು ಬದಲಾವಣೆಯಿಲ್ಲ: ಅಜಯ್ ಸಿಂಗ್

**ಬೆಂಗಳೂರು, ಜು.2**– ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ. ಬದಲಾವಣೆಯ ಮಾತೇ ಇಲ್ಲ ಎಂದು ಶಾಸಕ ಅಜಯ್ ಸಿಂಗ್ ಹೇಳಿದ್ದಾರೆ.

ಮುಖ್ಯಮಂತ್ರಿಗಳು ಉಪಮುಖ್ಯಮಂತ್ರಿಗಳು ಎಲ್ಲಾ ಶಾಸಕರು ಸಚಿವರು ಎಲ್ಲರೂ ಒಗ್ಗಟ್ಟಾಗಿದ್ದಾರೆ. ಕೆಲವು ಶಾಸಕರು ಸಚಿವರ ಸಮಾಧಾನ ವ್ಯಕ್ತಪಡಿಸಬಹುದು. ಕ್ಷೇತ್ರದ ಅನುದಾನದ ವಿಷಯದಲ್ಲಿ ಅದು ಸರಿ ಹೋಗಲಿದೆ ಎಂದಿದ್ದಾರೆ.ಸುದ್ಧಿಗಾರೊಂದಿಗೆ ಮಾತನಾಡಿ ಅವರು ತಿಳಿಸಿದರು.

## ಸಿದ್ದರಾಮಯ್ಯ ಹಾಗೂ ಸೋನಿಯಾಗಾಂಧಿಯವರನ್ನು ಭೇಟಿ ಮಾಡುವಾಗ ನಾನು ಜೊತೆಯಲ್ಲಿ ಹೋಗಿದ್ದೆ

**ಬೆಂಗಳೂರು,ಜು.2**– ಸಿದ್ದರಾಮಯ್ಯ ಅವರಿಗೆ ಸೋನಿಯಾಗಾಂಧಿಯವರನ್ನು ಭೇಟಿ ಮಾಡಿಸಿದ್ದು ನಾನೇ ಎಂದು ಹೇಳಿಕೊಂಡಿದ್ದ ಶಾಸಕ ಬಿ.ಆರ್.ಪಾಟೀಲ್ ಯೂ–ಟರ್ನ್ ಪಡೆದಿದ್ದು, ಸಿದ್ದರಾಮಯ್ಯ ಹಾಗೂ ಸೋನಿಯಾಗಾಂಧಿಯವರನ್ನು ಭೇಟಿ ಮಾಡುವಾಗ ನಾನು ಜೊತೆಯಲ್ಲಿ ಹೋಗಿದ್ದೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಇತ್ತೀಚೆಗೆ ಬಿ.ಆರ್. ಪಾಟೀಲ್‌ರ ಹೇಳಿಕೆಗಳು ತೀವ್ರ ವಿವಾದಕ್ಕಿಡಾಗುತ್ತಿದ್ದು, ಪಕ್ಷಕ್ಕೆ ಭಾರಿ ಮುಜುಗರ ಉಂಟು ಮಾಡುತ್ತಿದೆ.ವಸತಿ ಇಲಾಖೆಯ ಭ್ರಷ್ಟಾಚಾರದ ಬಗ್ಗೆ ಬಿ.ಆರ್.ಪಾಟೀಲ್‌ರ ಆಡಿಯೊ ಭಾರೀ ಚರ್ಚೆಗೆ ಗ್ರಾಸವಾಗಿತ್ತು. ಅನಂತರವೂ ಅವರು ತಮ ಹೇಳಿಕೆಯನ್ನು ಪುನರುಚ್ಚರಿಸುವ ಮೂಲಕ ಪಕ್ಷ ಹಾಗೂ ಸರ್ಕಾರಕ್ಕೆ ಮುಜುಗರ ಉಂಟುಮಾಡಿದ್ದರು.

ಈ ನಡುವೆ ಬಿ.ಆರ್.ಪಾಟೀಲ್ ತಮ ಆತ್ಮೀಯರೊಂದಿಗಿನ ಸಮಾಲೋಚನೆಯೊಂದಿಗೆ ಸಿದ್ದರಾಮಯ್ಯನವರಿಗೆ ಸೋನಿಯಾಗಾಂಧಿಯವರನ್ನು ಮೊದಲು ಭೇಟಿ ಮಾಡಿಸಿದ್ದು ನಾನು. ಆಗ ಅದೃಷ್ಟ ಚೆನ್ನಾಗಿತ್ತು. ಲಕ್ಕಿ ಲಾಟರಿ ಹೊಡೆದು ಮುಖ್ಯಮಂತ್ರಿಯಾದರು. ನನಗೆ ಗಾಡು ಇಲ್ಲ, ಗಾಡ್‌ಫಾದರ್ ಇಲ್ಲ ಎಂದು ವಿಷಾದಿಸಿದರು. ಇದು ಮತ್ತಷ್ಟು ಚರ್ಚೆಗಳನ್ನು ಹುಟ್ಟುಹಾಕಿತ್ತು. ಪಕ್ಷಕ್ಕೂ ಮುಜುಗರ ಉಂಟುಮಾಡಿತ್ತು. ಖುದ್ದು ಸಿದ್ದರಾಮಯ್ಯನವರೇ ಹೇಳಿಕೆಯಿಂದ ಇರಿಸುಮುರಿಸಿಗೆ ಒಳಗಾಗಿದ್ದರು.

ಹೀಗಾಗಿ ಬಿ.ಆರ್.ಪಾಟೀಲ್ ಮತ್ತೊಂದು ವಿಡಿಯೋ ಮಾಡಿ ಸ್ಪಷ್ಟನೆ ನೀಡಿದ್ದಾರೆ.

ನನ್ನ ಮತ್ತು ಸಿದ್ದರಾಮಯ್ಯನವರ ನಡುವಿನ ಸಂಬಂಧ ಹಾಳು ಮಾಡಲು ಷಡ್ಯಂತ್ರಗಳು ನಡೆದಿವೆ ಎಂದು ಅಳಲು ತೋಡಿಕೊಂಡಿದ್ದಾರೆ. ನನ್ನ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ. ನನ್ನ ತೇಜೋವಧೆ ಮಾಡುವ ಪ್ರಯತ್ನಗಳಾಗುತ್ತಿವೆ ಎಂದು ಆರೋಪಿಸಿದ್ದಾರೆ.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**